ಸಂಪುಟ : 10 ಸಂಚಿಕೆ: 123 ಪುಟ : 4+2 ಬೆಲೆ: 3.00 ಮಂಗಳವಾರ ಜೂನ್ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 123 Pages : 4+2 Price : 3.00 Tuesday June 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಜೂ.17ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 29 – ರಾಜೀವ ಗಾಂಧಿನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 27 – ಕೆ ಎಚ್ ಪಾಟೀಲ್ ಬಡಾವಣೆ, ವೀರನಾರಾಯಣ ಬಡಾವಣೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34 – ವಡ್ಡರಗೇರಿ, ಕೊರವರ ಓಣಿ, 46 ಪ್ಲಾಟ್, ಮೂರುಶಿಳ್ಳಿನ ವಕಾರ, ಹೂಗಾರ ಪ್ಲಾಟ್, ಶಿವಾನಂದ ಗಾರ್ಡನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 19, 24 ,25 – ಕುರುಬರ ಗರಡಿ, ಮಾಬುಸುಬಾನಿ ಕಟ್ಟಿ, ಕೊಪ್ಪದವರ ಲೈನ್, ಖಾನತೋಟ 2 ಭಾಗಗಳು, ಹಾಳದಿಬ್ಬ 3 ಭಾಗಗಳು, ಜಿ ಎಸ್ ಹಿರೇಮಠ, ಮದ್ಲಿ ಓಣಿ, ಕರಿ ದೇವರ ಗುಡಿ, ಜೀರ ಓಣಿ, ಗಣಪತಿ ಗುಡಿ, ಹನುಮಾನ ಗರಡಿ, ಹಿಡ್ಕಿಮಠ 2 ಭಾಗಗಳು, ಕೋಟಿಯವರ ಲೈನ್, ಮುನ್ಸಿ ಪ್ರೆಸ್. ವಾರ್ಡ್ ನಂ. 2 – ವೆಲ್ಫೇರ್ ಕುಷ್ಟಗಿ ಚಾಳ್, ಸ್ಲಾಬ್ ಮನೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 8, 9, 10 – ಹೆಲ್ತ್ ಕ್ಯಾಂಪ್, ಕಬಾಡೆ ರಸ್ತೆ, ತೆಗ್ಗಿನ ಪ್ಲಾಟ್, ಕುರಹಟ್ಟಿ ಪೇಟೆ, ಶಿರಹಟ್ಟಿ ಓಣಿ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಲಾಗಿದೆ.. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಬಿ.ಬಿ. ಅಸೂಟಿ ಸೂಚನೆ

# ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಎಲ್ಲ ಪಡಿತರ ಅಂಗಡಿಗಳ ಮುಂದೆ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಮಾಹಿತಿ ಒಳಗೊಂಡಿರುವ ಬ್ಯಾನರ್ ಅಳವಡಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಸೂಚಿಸಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜರುಗಿದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ದೊರಕುವಲ್ಲಿ ವಿಳಂಬವಾಗಬಾರದು. ಈ ನಿಟ್ಟಿನಲ್ಲಿ ಸಂಬಂಧಿತ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಬೇಕು. ಅನ್ನಭಾಗ್ಯದ ಅಕ್ಕಿಗಳು ಕಾಳ ಸಂತೆಯಲ್ಲಿ ಅಕ್ರಮವಾಗಿ ಮಾರಾಟವಾಗುತ್ತಿರುವ ಕುರಿತು ದೂರು ಬರುತ್ತಿರುವ ಹಿನ್ನೆಲೆಯಲ್ಲಿ ಇಂತಹ ಅವ್ಯವಹಾರಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು ಎಂದು ಆಹಾರ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಗದಗ ನಗರದಲ್ಲಿನ ಹಳೇ ಬಸ್ ನಿಲ್ದಾಣ ಹಾಗೂ ಹೊಸ ಬಸ್ ನಿಲ್ದಾಣಗಳ ಆವರಣದ ಸ್ವಚ್ಛತೆಯಿಂದ ಇರುವಂತೆ ನೋಡಿಕೊಳ್ಳಬೇಕು. ಅಂಗವಿಕಲರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥಿವಾಗಿ ಇರುವಂತೆ ಕ್ರಮ ವಹಿಸಬೇಕು. ಶಿಶು ಪಾಲನಾ ಕೇಂದ್ರ ವ್ಯವಸ್ಥಿತವಾಗಿರುವಂತೆ ನೋಡಿಕೊಳ್ಳಬೇಕು. ಮಹಿಳೆಯರ ವಿಶ್ರಾಂತಿ ಕೊಠಡಿಯ ಸ್ವಚ್ಛತೆ ಕುರಿತು ಗಮನಹರಿಸಬೇಕು. ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿನ ಬಸ್ ಸ್ಟ್ಯಾಂಡ್‌ಗಳು



ಸ್ವಚ್ಛವಾಗಿರುವಂತೆ ಹಾಗೂ ಮೂಲಭೂತ ಸೌಲಭ್ಯ ಇರುವಂತೆ ಗಮನ ಹರಿಸಬೇಕು. ಈ ಕುರಿತು ಸಮಿತಿಯ ಸದಸ್ಯರು ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸಿದ್ದಾರೆ. ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಗಳನ್ನು ತಾಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ಜರುಗಿಸಬೇಕು. ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಶೀಘ್ರವಾಗಿ ತಲುಪುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಬಿ.ಬಿ. ಅಸೂಟಿ ನಿರ್ದೇಶನ ನೀಡಿದರು.

ಪಂಚ ಗ್ಯಾರಂಟಿ ಯೋಜನೆಗಳ ಸಂಬಂಧಿತ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ನೀಡಿ, ಗೃಹಲಕ್ಷ್ಮೀ ಯೋಜನೆಯಡಿ ಎಪ್ರಿಲ್ 2025ರ ಅಂತ್ಯದವರೆಗೆ 2,55,916 ನೋಂದಣಿಯಾದ ಅರ್ಜಿಗಳ ಪೈಕಿ 2,50,421 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ವಾ.ಕ.ರ.ಸಾ ಸಂಸ್ಥೆಯಿಂದ ಯೋಜನೆ ಆರಂಭವಾದಾಗಿನಿಂದ ಎಪ್ರಿಲ್ 2025ರವರೆಗೆ 1841.55 ಲಕ್ಷ ಪ್ರಯಾಣಿಕರು ಪ್ರಯಾಣಿಸಿದ್ದಾರೆ. 114660.87 ಲಕ್ಷ ರೂ. ಮಹಿಳಾ ಪ್ರಯಾಣಿಕರ ಆದಾಯವಾಗಿದೆ. ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ ಡಿಸೆಂಬರ್ 2024ರ ಅಂತ್ಯದವರೆಗೆ 234190 ಪಡಿತರ ಚೀಟಿದಾರರಿಗೆ ಡಿಬಿಟಿ ಮೂಲಕ 12,80,34,140 ರೂ. ಹಣ ಸಂದಾಯ ಮಾಡಲಾಗಿದೆ. ಯುವನಿಧಿ ಯೋಜನೆಯಡಿ ಯೋಜನೆ ಆರಂಭದಿಂದ ಮೇ 2025ರವರೆಗೆ 3807 ಅರ್ಹ ಫಲಾನುಭವಿಗಳಿಗೆ 7,55,19,000 ರೂ. ಡಿಬಿಟಿ ಮೂಲಕ ಹಣ ವರ್ಗಾವಣೆಯಾಗಿರುತ್ತದೆ. ಗೃಹ ಜ್ಯೋತಿ ಯೋಜನೆಯಡಿ ಯೋಜನೆ ಆರಂಭದಿಂದ ಎಪ್ರಿಲ್ 2025ರವರೆಗೆ 273251 ಸ್ಥಾವರಗಳು ನೋಂದಣಿಯಾಗಿದ್ದು ಶೇ.98.68 ಪ್ರಗತಿಯಾಗಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಸಮಿತಿಯ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ಉಪಾಧ್ಯಕ್ಷರುಗಳಾದ ಪಿ.ಬಿ. ಅಗಳವಾಡಿ, ದೀಪಕ ಲಮಾಣಿ, ಫಕ್ರುಸಾಬ ಚಿಕ್ಕಮಣ್ಣೂರ, ಗದಗ ಜಿಲ್ಲಾ ಸಮಿತಿಯ ಸದಸ್ಯರಾದ ಅಶೋಕ ಮಂದಾಲಿ ಸೇರಿದಂತೆ ಸಮಿತಿಯ ಸದಸ್ಯರು, ಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

> ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಮುಖ್ಯಸ್ಥರು ಅವುಗಳ ಸಮರ್ಪಕ ಅನುಷ್ಠಾನದ ಕುರಿತು ಪರಾಮರ್ಶೆ ನಡೆಸಬೇಕು. ಅರ್ಹರಿಗೆ ಯೋಜನೆಗಳ ಸೌಲಭ್ಯ ನಿಗದಿತ ಅವಧಿಯೊಳಗೆ ಲಭ್ಯವಾಗುವಂತೆ ಕ್ರಮ ವಹಿಸಬೇಕು. ಸರ್ಕಾರದ ಸೌಲಭ್ಯಗಳ ಮೂಲಕ ಜನಸಾಮಾನ್ಯರ ಆರ್ಥಿಕ ಅಭಿವೃದ್ಧಿಗೆ ಸಹಕಾರಿಯಾಗಲಿ ಎಂದರು.

> ಗದಗ ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಪ್ರಾಧಿಕಾರದ ಸದಸ್ಯ ಅಶೋಕ ಮಂದಾಲಿ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಮಾರ್ಗದರ್ಶನದಂತೆ ಗದಗ ತಾಲೂಕಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಲಕ್ಷ್ಮೀ ಯೋಜನೆಯನ್ನು ಅರ್ಹರೆಲ್ಲರಿಗೂ ತಲುಪಿಸುವಲ್ಲಿ ಸಫಲರಾಗಿದ್ದೇವೆ. ಇನ್ನುಳಿದ ಯೋಜನೆಗಳ ಸಂಪೂರ್ಣ ಪ್ರಗತಿಗೆ ಪ್ರಯತ್ನಿಸಲಾಗುತ್ತಿದೆ. ಅಧಿಕಾರಿಗಳೆಲ್ಲರೂ ಈ ನಿಟ್ಟಿನಲ್ಲಿ ಕಾರ್ಯನಿರ್ವಹಣೆಗೆ ಮುಂದಾಗಬೇಕೆಂದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಕರ್ನಾಟಕ ಹಜ್ ಭವನದಲ್ಲಿ 03 ತಿಂಗಳ ವಸತಿ ಸಹಿತ ಐಎಎಸ್/ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮುಖ್ಯ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುತ್ತಿದ್ದು, ಸದರಿ ತರಬೇತಿಗೆ ಅರ್ಹ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಬೌದ್ಧ, ಪರ್ಶಿಯನ್) ವಿದ್ಯಾರ್ಥಿಗಳು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 21 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ : 8277799990 ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸನಾತನ ಹಿಂದೂ ಧರ್ಮ ಅಭಿಮಾನಿಗಳ 'ಚಿಂತನಾ ಸಭೆ'ಯಲ್ಲಿ ಡಾ. ಪ್ರವೀಣ ತೊಗಾಡಿಯಾ

# ಸನಾತನ ಧರ್ಮದ ವಿರುದ್ಧ ಕುತಂತ್ರ ನಡೆಯುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಗತ್ತಿನ 200 ದೇಶಗಳ ಪೈಕಿ ಭಾರತ ಮತ್ತು ನೇಪಾಳದಲ್ಲಿ ಮಾತ್ರ ಹಿಂದೂಗಳಿಗೆ ನೆಲೆಯಿದೆ. 198 ದೇಶಗಳಲ್ಲಿ ಹಿಂದೂಗಳ ಸಂಖ್ಯೆ ಬಹುತೇಕ ಕಡಿಮೆ ಇದೆ. ಇತಿಹಾಸ ಪುಟ ತೆರೆದರೆ ಜಗತ್ತಿನ ನಾನಾ ದೇಶಗಳ ಜನಸಂಖ್ಯೆ ಹೆಚ್ಚುತ್ತಾ ಹೋಗುತ್ತಿದೆ. ಜಗತ್ತಿನಲ್ಲಿ ಶೇ.2.4ರಷ್ಟು ಮುಸ್ಲಿಂ ಸಮುದಾಯದ ಜನಸಂಖ್ಯೆ ಹೆಚ್ಚುತ್ತಿದೆ. ಆದರೆ, ಹಿಂದೂಗಳು ಶೇ. 1.9ಕ್ಕೆ ಕುಸಿಯುತ್ತಿದ್ದಾರೆ. ಹಿಂದೂಗಳ ಸಂಖ್ಯೆ ಹೆಚ್ಚಳವಾದಾಗ ಮಾತ್ರ ಹಿಂದೂ ಧರ್ಮ ಉಳಿಯಲು ಸಾಧ್ಯ ಎಂದು ಅಂತಾರಾಷ್ಟ್ರೀಯ ಹಿಂದೂ ಪರಿಷತ್ ರಾಷ್ಟ್ರೀಯ ಬಜರಂಗದಳದ ಸಂಸ್ಥಾಪಕ ಡಾ. ಪ್ರವೀಣ ತೊಗಾಡಿಯಾ ಹೇಳಿದರು.

ನಗರದ ಶ್ರೀನಿವಾಸ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಸನಾತನ ಹಿಂದೂ ಧರ್ಮ ಅಭಿಮಾನಿಗಳ 'ಚಿಂತನಾ ಸಭೆ'ಯನ್ನುದ್ದೇಶಿಸಿ ಅವರು ಮಾತನಾಡಿದರು. ಮುಸಲ್ಮಾನರ ಜನಸಂಖ್ಯೆಯ ಹೆಚ್ಚಳ ಹಿಂದುತ್ವಕ್ಕೆ ಮಾರಕವಾಗಿದೆ. ದೇಶ ಸ್ವತಂತ್ರವಾದ ನಂತರ ಹಿಂದೂಗಳ ಸಂಖ್ಯೆ ಶೇ. 86 ಇತ್ತು. ಈಗ



ಶೇ. 78ರಷ್ಟು ಇದೆ. ಈ ಅಂಕಿ–ಅಂಶ ನಮ್ಮ ಧರ್ಮ ಅಳಿವಿನಂಚಿನಲ್ಲಿದೆ ಎಂಬುದಕ್ಕೆ ಸ್ಪಷ್ಟ ಉದಾಹರಣೆಯಾಗಿದೆ. ಕಲಿಯುಗದಲ್ಲಿ ಸನಾತನ ಧರ್ಮದ ವಿರುದ್ಧ ಕುತಂತ್ರ ನಡೆಯುತ್ತಿದೆ. ಹಿಂದೂಗಳ ಸರ್ವನಾಶಕ್ಕಾಗಿ ಅನ್ಯ ಧರ್ಮಗಳು ಕಾಯುತ್ತಿವೆ. ಭಾರತದಲ್ಲಿನ ಹಿಂದೂಗಳು ಸುರಕ್ಷಿತರಾಗಲು ನಾವೆಲ್ಲರೂ ಜಾಗೃತರಾಗಬೇಕು ಎಂದು ಕರೆ ನೀಡಿದರು.

ಸದ್ಗುರು ಸದಾಶಿವಾನಂದ ಮಹಾಸ್ವಾಮೀಜಿ ಮಾತನಾಡಿ, ಪ್ರತಿಯೊಬ್ಬರೂ ದೇಶದ ಬಗ್ಗೆ ಪ್ರೀತಿ, ಅಭಿಮಾನ ಹೊಂದಿರಬೇಕು. ದೇಶದಲ್ಲಿ ಮೊದಲು ಮಂತ್ರಗಳು ಹುಟ್ಟಿದವು. ಇಂತಹ ಸಮೃದ್ಧ ದೇಶ ಕೋಟಿ–ಕೋಟಿ ವರ್ಷಗಳಿಂದ ಸಮೃದ್ಧವಾಗಿದೆ. ಆದರೆ, ಕಳೆದೊಂದು ಸಾವಿರ ವರ್ಷಗಳಿಂದ ಹಲವಾರು ಮುಖಗಳಿಂದ ಲೂಟಿಗೆ ಒಳಗಾಯಿತು. ನಾವು ಹೃದಯದಲ್ಲಿ ಭಗವಂತನನ್ನು ಕಂಡಿದ್ದೇವೆ. ಭಗವಂತನ ಆರಾಧನೆ ನಿರಂತರವಾಗಿ ನಡೆಯಬೇಕೆಂದೇ ದೇವಸ್ಥಾನಗಳು ನಿರ್ಮಾಣವಾಗಿವೆ. ಇಂತಹ ಸಮೃದ್ಧ, ವಿಶಾಲ ದೇಶ ಇಂದು ನಿಧಾನವಾಗಿ ಹಂಚಿ ಹೋಗುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ನದಿಗಳು, ಸೂರ್ಯ, ಅಗ್ನಿ, ಭೂಮಿಯನ್ನು ಪೂಜಿಸುವವನು ನಿಜವಾದ ಸನಾತನಿಯಾಗಿದ್ದಾನೆ. ಸನಾತನ ಸಮುದಾಯ ಉಳಿಯಬೇಕೆಂದರೆ ನಮ್ಮಲ್ಲಿನ ಜಾತೀಯತೆ ಹೋಗಬೇಕು. ಜಾತಿಯನ್ನು ಆಧರಿಸಿ ಗುರುತಿಸಿಕೊಳ್ಳುವುದನ್ನು ಕಡಿಮೆ ಮಾಡಬೇಕು. ಜಾತಿಗೊಂದು ಮಠ ಉದಯವಾಗಿ ಭಾರತವನ್ನು ತುಂಡು ಮಾಡುವ ಹುನ್ನಾರ ದೇಶದಲ್ಲಿ ನಡೆಯುತ್ತಿದೆ. ಇದರಿಂದ ಭಾರತ ಕ್ಷೋಭೆಗೆ ಒಳಗಾಗಿದೆ. ಹಿಂದೂಗಳು ಇದಾವುದಕ್ಕೂ ಕಿವಿಗೊಡದೆ ಧರ್ಮದ ಉಳಿವಿಗಾಗಿ ಬಾಳಬೇಕು. ಸಾವಿರಾರು ವರ್ಷಗಳ ಪರಂಪರೆಯನ್ನು ಉಳಿಸಿ, ಬೆಳೆಸಿಕೊಂಡು ಹೋಗುವ ಅವಶ್ಯಕತೆ ಇದ್ದು, ರಾಜಕಾರಣಕ್ಕಾಗಿ ಧರ್ಮ ಮಾಡುವ ಯಾರನ್ನೂ ನಂಬಬಾರದು ಎಂದು ಹಿಂದೂಗಳಿಗೆ ಕಿವಿಮಾತು ಹೇಳಿದರು. ಈ ಸಂದರ್ಭದಲ್ಲಿ ಹಿಂದೂ ಸಮಾಜದ ಮುಖಂಡರಾದ ಶ್ರೀಕಾಂತ್ ಖಟವಟೆ, ರಮೇಶ್ ಕುಲಕರ್ಣಿ, ಶ್ರೀರಾಮ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ, ಮಹೇಶ್ ರೋಖಡೆ, ಸೋಮು ಗುಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಕೃತಪುರ ಸೇವಾ ಸಮಿತಿಯಿಂದ ಡಾ. ಪ್ರವೀಣ್ ತೊಗಾಡಿಯಾ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

> ಹಿಂದುತ್ವಕ್ಕಾಗಿ ನನ್ನ ಹೋರಾಟವನ್ನು ಮುಡಿಪಾಗಿಟ್ಟಿದ್ದೇನೆ. ಕಳೆದ ನಾಲ್ಕು ದಶಕಗಳಿಂದ ದೇಶಾದ್ಯಂತ ಹಿಂದೂ ಸಂಘಟನೆ ಮಾಡಿದ್ದೇನೆ. ಮೊದಲು ಹಿಂದೂಗಳನ್ನು ಒಗ್ಗೂಡಿಸಲು ಗುಜರಾತ್‌ನಲ್ಲಿ 1989ರಲ್ಲಿ ಹೋರಾಟ ಅರಂಭಿಸಿದೆ. ನಂತರ ರಾಮ ಮಂದಿರ ನಿರ್ಮಾಣದ ಸಂಕಲ್ಪಕ್ಕಾಗಿ ಭಾರತದ ಎಲ್ಲ ಜಾತಿಗಳನ್ನು ಒಗ್ಗೂಡಿಸಲು ನನ್ನ ಜೀವನದಲ್ಲಿ ಎರಡನೇ ಹೊರಾಟಕ್ಕೆ ಇಳಿದೆ. ದೇಶದ ಮೂಲೆ ಮೂಲೆಯಲ್ಲಿ ಸಂಚರಿಸಿ ಧರ್ಮದ ಬಗ್ಗೆ ಜಾಗೃತಿ ಮೂಡಿಸಿ 'ಚಲೋ ಅಯೋಧ್ಯಾ' ಕಾರ್ಯಕ್ರಮ ಆಯೋಜಿಸಿ ಇಂದು ಯಶಸ್ವಿಯಾಗಿದ್ದೇವೆ. ಹಿಂದೂಗಳ ಕನಸುಗಳನ್ನು ರಾಮಮಂದಿರದ ಮೂಲಕ ಈಡೇರಿಸಿದ ತೃಪ್ತಿ ನನಗಿದೆ ಡಾ. ಡಾ. ಪ್ರವೀಣ ತೊಗಾಡಿಯಾ ಹೇಳಿದರು.

### ಪ್ರವಾಹದಿಂದ ಹಾನಿಗೀಡಾದ ಪ್ರದೇಶ ವೀಕ್ಷಿಸಿದ ಸಚಿವ ಎಚ್.ಕೆ. ಪಾಟೀಲ । ಸೂಕ್ತ ಪರಿಹಾರ ಒದಗಿಸುವ ಭರವಸೆ

# ಬೆಳೆಹಾನಿ ಸಮೀಕ್ಷೆ ನಡೆಸಲು ಅಧಿಕಾರಿಗಳಿಗೆ ಸೂಚನೆ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಣ್ಣೆಹಳ್ಳ ಪ್ರವಾಹದಿಂದ ಹಾನಿಗೀಡಾದ ನರಗುಂದ ಹಾಗೂ ರೋಣ ಭಾಗದ ಹಳ್ಳಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ ಭಾನುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನರಗುಂದ ತಾಲೂಕಿನ ಕುರ್ಲಗೇರಿ ಗ್ರಾಮದಲ್ಲಿ ಬೆಳೆಹಾನಿ ಸಮೀಕ್ಷೆ ನಡೆಸಿದ ಜನಪ್ರತಿನಿಧಿಗಳು ವಿವಿಧ ಬಿತ್ತನೆ ಕ್ಷೇತ್ರಗಳು ಹಾನಿಗೀಡಾದ ಬಗ್ಗೆ ಪರಿಹಾರ ಒದಗಿಸುವುದಾಗಿ ಭರವಸೆ ನೀಡಿದರು. ಕುರ್ಲಗೇರಿ ಗ್ರಾಮದ ಮೇಲ್ಸೇತುವೆ ಕೆಲಭಾಗಗಳಲ್ಲಿ ಗಿಡಗಂಟಿಗಳನ್ನು ತುರ್ತು ತೆರವುಗೊಳಿಸಲು ಸಚಿವ ಎಚ್.ಕೆ. ಪಾಟೀಲ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕುರ್ಲಗೇರಿ ಗ್ರಾಮದ ಸ್ಥಳಾಂತರ ಗ್ರಾಮದಲ್ಲಿ



> ಬೆಣ್ಣೆಹಳ್ಳದ ಭಾಗದಲ್ಲಿ ಅಂದಾಜು 7–8 ಸಾವಿರ ಎಕರೆ ಭೂಮಿ ಪ್ರವಾಹಕ್ಕೆ ಒಳಪಡುತ್ತದೆ. ಈ ಬಾರಿ 2000 ಕ್ಕೂ ಅಧಿಕ ಎಕರೆ ಬಿತ್ತನೆ ಜಮೀನು ನಾಶ ಆಗಿರಬಹುದು ಎಂದು ಅಂದಾಜಿಸಲಾಗಿದೆ. ತುರ್ತು ಸಮೀಕ್ಷೆ ನಡೆಸಲು ಸೂಚಿಸಲಾಗಿದೆ. ಬೆಳೆ ಪರಿಹಾರ ಸಮರ್ಪಕ ನೀಡಲಾಗುವುದು.
>
> – ಎಚ್.ಕೆ. ಪಾಟೀಲ.

ಮೂಲಭೂತ ಸೌಕರ್ಯ ಇಲ್ಲದ ಕುರಿತು, ಮನೆಗಳ ಸಮರ್ಪಕ ಹಂಚಿಕೆ ಆಗದ ಕುರಿತು ಸಚಿವರಲ್ಲಿ ಸಾರ್ವಜನಿಕರು ತಮ್ಮ ಅಳಲು ತೋಡಿಕೊಂಡರಲ್ಲದೆ, ಹೊಲಗಳಲ್ಲಿ ಒಡ್ಡು ಒಡೆದ ಕುರಿತು ಸಚಿವರ ಗಮನಕ್ಕೆ ತಂದರು.

ಈ ವೇಳೆ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಕುರ್ಲಗೇರಿ ನೂತನ ಗ್ರಾಮಕ್ಕೆ ಜನರು ಸ್ಥಳಾಂತರಗೊಂಡಿಲ್ಲ. ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮನೆ ಅಗತ್ಯವಿರುವವರ ಪಟ್ಟಿ ಸಿದ್ಧಪಡಿಸಿ ಅವರಿಗೆ ಮನೆ ಹಂಚಲು ಸೂಚಿಸಿದ್ದೇನೆ ಎಂದರು. ಗ್ರಾಮದಲ್ಲಿ ನೀರಿನ ಹರಿವಿನಿಂದ ಒಡ್ಡು ಒಡೆದು ಹೋದ ಕುರಿತು ಸಚಿವ ಶಾಸಕರಲ್ಲಿ ಜನರು ನೋವು ತೋಡಿಕೊಂಡಾಗ, ಒಡ್ಡು ಹಾಕಿಸಿಕೊಡುವುದಾಗಿ ಶಾಸಕ ಪಾಟೀಲ ಭರವಸೆ ನೀಡಿದರು.

> ನರಗುಂದ ಕ್ಷೇತ್ರದ ನಾಲ್ಕಾರು ಹಳ್ಳಿಗಳ ಜನರು ಪ್ರವಾಹ ಸಂದರ್ಭದಲ್ಲಿ ಸಮಸ್ಯೆ ಅನುಭವಿಸುತ್ತಾರೆ. ಶಿಗ್ಗಾವಿಯಿಂದ ನರಗುಂದ, ರೋಣ ಕ್ಷೇತ್ರ ಮುಕ್ತಾಯದವರೆಗೂ ಬೆಣ್ಣೆಹಳ್ಳಕ್ಕೆ ತಡೆಗೋಡೆ ಸೇರಿದಂತೆ ಅಭಿವೃದ್ಧಿ ಕಾರ್ಯಕ್ಕೆ ಸರ್ಕಾರ ಘೋಷಿಸಿದ ಯೋಜನೆ ಪರಿಣಾಮಕಾರಿ ಅನುಷ್ಠಾನ ಆಗಬೇಕು. ಆಗ ಮಾತ್ರ ಸಮಸ್ಯೆಗೆ ಶಾಶ್ವತ ಪರಿಹಾರ ಸಿಕ್ಕಂತಾಗುತ್ತದೆ.
>
> –ಸಿ.ಸಿ. ಪಾಟೀಲ.
> ಶಾಸಕರು, ನರಗುಂದ.

ಸಿ.ಸಿ. ಪಾಟೀಲ, ಸಚಿವ ಎಚ್.ಕೆ.

▶▶ 3ನೇ ಪುಟಕ್ಕೆ



## ಉಚಿತ ಆಟೋ ಸೇವೆ



■ವಿಜಯಸಾಕ್ಷಿ ಸುದ್ದಿ, ಗದಗ

ವೀರೇಶ್ವರ ಪುಣ್ಯಾಶ್ರಮದ ಜಾತ್ರಾ ಮಹೋತ್ಸವದ ಅಂಗವಾಗಿ ಬೇರೆ ಜಿಲ್ಲೆ, ತಾಲೂಕುಗಳಿಂದ ಬಂದಿದ್ದ ಭಕ್ತಾದಿಗಳಿಗಾಗಿ ಗದಗ ಜಿಲ್ಲಾ ಆಟೋ ಚಾಲಕರ, ಮಾಲಕರ ಸಂಘದ ನೇತೃತ್ವದಲ್ಲಿ

ಹೊಸ ಬಸ್ ನಿಲ್ದಾಣದಿಂದ ಶ್ರಿ ವೀರೇಶ್ವರ ಪುಣ್ಯಾಶ್ರಮಕ್ಕೆ ಉಚಿತವಾಗಿ ಆಟೋ ಸೇವೆ ನೀಡಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಆಟೋ ಚಾಲಕರ ಮಾಲಕರ ಸಂಘದ ಅಧ್ಯಕ್ಷ ವಿಜಯ ಕಲ್ಮನಿ, ಬೆಟಗೇರಿ ಬಡಾವಣೆ ಠಾಣೆಯ ಪಿ.ಎಸ್.ಐ ಮಾರುತಿ ಜೋಗದಂಡಕರ್, ಹಿರಿಯರಾದ ಮಂಜುನಾಥ್ ಅಗಸಿಮನಿ, ಸದಸ್ಯರಾದ ಗಂಗಾಧರ ಬ್ಯಾಗೋಟಿ, ರಾಘವೇಂದ್ರ, ವಿಜಯ್ ಅಳವಂಡಿ, ರಫೀಕ್ ಮುಳಗುಂದ, ನಾಗರಾಜ್ ಗುಳೇದಗುಡ್ಡ, ಮಾದೇವ ಛಲವಾದಿ,

ಬಸವರಾಜ್ ಹಲ್ಲೂರ್, ಈರಣ್ಣ ಗೆಜ್ಜೆಹಳ್ಳಿ, ಮಂಜುನಾಥ್ ಪೂಜಾರ್, ಮೋಹನ್ ಚಲವಾದಿ, ಸುರೇಶ್, ಶಿವರಾಜ್ ಹಡಗಲಿ, ಪ್ರವೀಣ್ ಯಳವತ್ತಿ ಸೇರಿದಂತೆ ನೂರಾರು ಆಟೋ ಚಾಲಕರು ಹಾಗೂ ಮಾಲೀಕರು ಕಾರ್ಯಕ್ರಮದಲ್ಲಿ ಇದ್ದರು.

# ಕತ್ತು ಸೀಳಿದ ಸ್ಥಿತಿಯಲ್ಲಿ ಖ್ಯಾತ ಮಾಡೆಲ್ ಶವ ಪತ್ತೆ!

**■ವಿಜಯಸಾಕ್ಷಿ ಸುದ್ದಿ, ಚಂಡೀಗಢ**

ಕತ್ತು ಸೀಳಿದ ಸ್ಥಿತಿಯಲ್ಲಿ ಖ್ಯಾತ ಮಾಡೆಲ್ ಶವ ಪತ್ತೆಯಾಗಿರುವ ಘಟನೆ ಇಲ್ಲಿನ ಸೋನಿಪತ್ ಕಾಲುವೆಯಲ್ಲಿ ಜರುಗಿದೆ. ಶೀತಲ್ ಮೃತ ಮಾಡೆಲ್. ಶೀತಲ್ ಅವರು, ಹರಿಯಾಣವಿ ಸಂಗೀತ ಉದ್ಯಮದಲ್ಲಿ ಮಾಡೆಲ್ ಆಗಿ ಕೆಲಸ ಮಾಡುತ್ತಿದ್ದರು ಎಂದು ತಿಳಿದು ಬಂದಿದೆ.

ಕೊಲೆಗೆ ಕಾರಣ ತಿಳಿದು ಬಂದಿಲ್ಲ. ತನಿಖೆ ಮುಂದುವರಿದಿದೆ. ಶೀತಲ್ ತನ್ನ ಸಹೋದರಿ ನೇಹಾ ಜೊತೆ ಪಾಣಿಪತ್‌ನಲ್ಲಿ ವಾಸಿಸುತ್ತಿದ್ದರು.

ಜೂನ್ 14 ರಂದು ಮಾಡೆಲ್ ಶೂಟಿಂಗ್‌ಗಾಗಿ ಅಹರ್ ಗ್ರಾಮಕ್ಕೆ ತೆರಳಿದ್ದರು. ಮರಳಿ ಮನೆಗೆ



ಬಾರದೇ ಇದ್ದಾಗ ಸಹೋದರಿ ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲಿಸಿದ್ದರು. ತನಿಖೆಗೆ ಇಳಿದ ಪೊಲೀಸರಿಗೆ ಖಾಂಡಾ ಗ್ರಾಮದ ಬಳಿಯ ಕಾಲುವೆಯಲ್ಲಿ ಮೃತದೇಹವನ್ನು ಪತ್ತೆ ಹಚ್ಚಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು ಆರೋಪಿಗಳಿಗಾಗಿ ಹುಡುಕಾಟ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಉಭಯ ಶ್ರೀಗಳ ಜಾತ್ರಾ ಮಹೋತ್ಸವ: ಶಿವಾನುಭವಗೋಷ್ಠಿಯಲ್ಲಿ ಮುಂಡರಗಿ ಶ್ರೀಗಳು**

# ವೀರೇಶ್ವರ ಪುಣ್ಯಾಶ್ರಮ ಕಲೆಗಳನ್ನು ಪೋಷಿಸುತ್ತಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಮುಂಡರಗಿಯ ಶ್ರೀಮಠಕ್ಕೂ ಗದುಗಿನ ವೀರೇಶ್ವರ ಪುಣ್ಯಾಶ್ರಮಕ್ಕೂ ಅವಿನಾಭಾವ ಸಂಬಂಧವಿದೆ ಎಂದು ಮುಂಡರಗಿಯ ನಾಡೋಜ ಜ. ಪೂಜ್ಯಶ್ರೀ ಡಾ. ಅನ್ನದಾನೀಶ್ವರ ಶಿವಯೋಗಿಗಳವರು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಶಿವಾನುಭವಗೋಷ್ಠಿ ಕಾರ್ಯಕ್ರಮದಲ್ಲಿ ಅವರು ಆಶೀರ್ವಚನ ನೀಡುತ್ತಿದ್ದರು.

ಈ ಹಿಂದೆ ವೀರೇಶ್ವರ ಪುಣ್ಯಾಶ್ರಮವು ಆರ್ಥಿಕವಾಗಿ ಮತ್ತು ನಾಟಕ ಕಂಪನಿ ಮುಚ್ಚುವ ಹಂತಕ್ಕೆ ಬಂದಾಗ ಪೂಜ್ಯಶ್ರೀ ಪುಟ್ಟರಾಜ ಕವಿ ಗವಾಯಿಗಳವರಿಗೆ 300




ರೂ.ಗಳನ್ನು ನೀಡಿ, ಯಾವುದೇ ಕಾರಣಕ್ಕೂ ಎಷ್ಟೇ ಕಷ್ಟ ಬಂದರೂ ನಾಟಕ ಕಂಪನಿ ಮುಚ್ಚಬಾರದು ಎಂದು ಹೇಳಿದ್ದರಿಂದ ಅಂದು ಹೇಮರೆಡ್ಡಿ ಮಲ್ಲಮ್ಮ ನಾಟಕ ಒಂದು ವರ್ಷಗಳವರೆಗೆ ನಿರಂತರವಾಗಿ ಪ್ರದರ್ಶನಗೊಂಡು ಆರ್ಥಿಕ ಸಂಕಷ್ಟನ್ನು ದೂರ ಮಾಡಿತು. ಬಸರಿಗಿಡದ ವೀರಪ್ಪನವರು ತಮ್ಮ ಸಂಪತ್ತನ್ನು ದಾನ ಮಾಡಿ ವೀರೇಶ್ವರ ಪುಣ್ಯಾಶ್ರಮ ಸ್ಥಾಪನೆಗೆ ಕಾರಣವಾಗಿ ಧರ್ಮಾತ್ಮರಾಗಿದ್ದರೆ. ಉಭಯ ಗುರುಗಳ ಮಾರ್ಗದರ್ಶನಂತೆ ಕಲೆ, ಸಾಹಿತ್ಯ, ಸಂಗೀತವನ್ನು ಉಳಿಸಿ, ಬೆಳೆಸುತ್ತ ಇಂದಿನ ಪೂಜ್ಯರಾದ ಡಾ. ಕಲ್ಲಯ್ಯಜ್ಜನವರು ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ ಎಂದು ಹೇಳಿದರು.

ಗುಳೇದಗುಡ್ಡದ ಒಪ್ಪತ್ತೇಶ್ವರ ಸಂಸ್ಥಾನ ಮಠದ ಪೂಜ್ಯಶ್ರೀ ಅಭಿನವ ಒಪ್ಪತ್ತೇಶ್ವರ ಮಹಾಸ್ವಾಮಿಗಳು ಹಾಗೂ ಅಸುಂಡಿ ಅಧ್ಯಾತ್ಮ ವಿದ್ಯಾಶ್ರಮದ ಪೂಜ್ಯಶ್ರೀ ಶಿವಶರಣೆ ಡಾ. ನೀಲಮ್ಮ ತಾಯಿಯವರು ಮಾತನಾಡಿದರು. ಹೊಸಳ್ಳಿ ಬೂದೀಶ್ವರ ಸಂಸ್ಥಾನ ಮಠದ ಪೂಜ್ಯಶ್ರೀ ಜ. ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಅಡ್ನೂರ-ರಾಜೂರು ಬೃಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಕನಕಗಿರಿ ಸುವರ್ಣಗಿರಿ ಸಂಸ್ಥಾನ ವಿರಕ್ತಮಠದ ಪೂಜ್ಯಶ್ರೀ ಡಾ. ಚನ್ನಮಲ್ಲ ಮಹಾಸ್ವಾಮಿಗಳು, ಕಪೋತಗಿರಿ ನಂದಿವೇರಿ ಸಂಸ್ಥಾನಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು, ಹೂವಿನಹಡಗಲಿಯ ಡಾ. ಹಿರಿಯ ಶಾಂತವೀರ ಮಹಾಸ್ವಾಮಿಗಳು, ಹಿರೇಮಲ್ಲನಕೇರಿಯ ಪೂಜ್ಯಶ್ರೀ ಚನ್ನಬಸವ ಮಹಾಸ್ವಾಮಿಗಳು, ಎಚ್.ಎಸ್. ವೆಂಕಟಾಪೂರದ ಪೂಜ್ಯಶ್ರೀ ಗುರುಸಿದ್ದೇಶ್ವರ ಶಿವಾಚಾರ್ಯರು, ಹೊಳಲಿನ ಚೆನ್ನಬಸವ ದೇವರು ಸಮ್ಮುಖ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ತಾತನಗೌಡ ಪಾಟೀಲ, ಪೀರಸಾಬ ಕೌತಾಳ, ಪ್ರಕಾಶ ಬಸರಿಗಿಡದ, ಮಹಾಂತೇಶ ಕೆ, ಶೇಖಣ್ಣ ಗದ್ದಿಕೇರಿ, ಚನ್ನಬಸಯ್ಯ ಬಂಕಾಪುರಮಠ, ಶಿವಮೊಗ್ಗದ ಎಸ್.ಗುರುಪಂಚಾಕ್ಷರಿ ಮುಂತಾದವರು ಉಪಸ್ಥಿತರಿದ್ದರು. ಶಿವಮೊಗ್ಗದ ಶಾಖಾ ಆಶ್ರಮದ ಅಂಧ ವಿದ್ಯಾರ್ಥಿಗಳಿಂದ ಪ್ರಾರ್ಥನೆ ಜರುಗಿತು. ಪೂಜ್ಯಶ್ರೀ ಕಲ್ಲಯ್ಯಜ್ಜನವರು ಅಭಾರ ಮನ್ನಣೆಗೈದರು. ಶಿವಲಿಂಗಯ್ಯಶಾಸ್ತ್ರಿ ಹಿರೇಮಠ ಸಿದ್ದಾಪೂರ ಸ್ವಾಗತಿಸಿದರು. ಶಡಗರವಳ್ಳಿಯ ಶಂಕ್ರಯ್ಯಶಾಸ್ತ್ರಿ ಹಿರೇಮಠ ಅವರು ಕಾರ್ಯಕ್ರಮ ನಿರೂಪಿಸಿದರು.

ನಂತರ ಅಹೋರಾತ್ರಿ ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಸಂಗೀತ ಕಲಾವಿದರಿಂದ ಸ್ವರ ಸಮಾರಾಧನೆ ಸಂಗೀತ ಸಮಾರಾಧನೆ ಕಾರ್ಯಕ್ರಮ ಜರುಗಿತು.

> ಸೋಲಾಪುರದ ಬಸವಲಿಂಗೇಶ್ವರ ತುಪ್ಪಿನ ವಿರಕ್ತಮಠದ ಪೂಜ್ಯಶ್ರೀ ಡಾ. ಅಭಿನವ ಬಸವಲಿಂಗ ಮಹಾಸ್ವಾಮಿಗಳು ಮಾತನಾಡಿ, ವೀರೇಶ್ವರ ಪುಣ್ಯಾಶ್ರಮದ ಉಭಯ ಗುರುಗಳು ಸರಳ ವ್ಯಕ್ತಿತ್ವಕ್ಕೆ ಸಾಕ್ಷಿಯಾಗಿದ್ದಾರೆ. ವಸಂತ ಬಂದರೆ ಪ್ರಕೃತಿಯಲ್ಲಿ ಬದಲಾವಣೆಯಾಗುವಂತೆ, ಸಂತರುಗಳು ಸಮಾಜದಲ್ಲಿ ಬಂದರೆ ಬದಲಾವಣೆ ಆಗುತ್ತದೆ. ಅಂಥಹ ಸಂತರು ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲಿ ಬಂದು ನೆಲೆಸಿದ್ದಾರೆ. ಅವರುಗಳು ಈ ನಾಡಿಗೆ ಸೂರ್ಯ-ಚಂದ್ರರು ಇದ್ದ ಹಾಗೆ. ತಂದೆ-ತಾಯಿ ನಮ್ಮನ್ನು ಜಗತ್ತಿಗೆ ತಂದರೆ, ಈ ಜಗತ್ತಿನಿಂದ ಸ್ವರ್ಗಕ್ಕೆ ಕರೆದುಕೊಂಡು ಹೋಗಲು ಗುರುಗಳಿಂದ ಮಾತ್ರ ಸಾಧ್ಯವಾಗುತ್ತದೆ. ಅಂತಹ ಗುರುಗಳು ಉಭಯ ಶ್ರೀಗಳಾಗಿದ್ದಾರೆ ಎಂದು ಹೇಳಿದರು.

# ಧಾರಕಾರ ಮಳೆ: ಇಂದು ಉತ್ತರ ಕನ್ನಡದ 8 ತಾಲೂಕುಗಳ ಶಾಲೆಗಳಿಗೆ ರಜೆ!



**■ವಿಜಯಸಾಕ್ಷಿ ಸುದ್ದಿ, ಕಾರವಾರ**

ಕರ್ನಾಟಕದಲ್ಲಿ ಮುಂಗಾರು ಚುರುಕುಗೊಂಡಿದ್ದು, ಹಲವು ಜಿಲ್ಲೆಗಳಲ್ಲಿ ಮಳೆಯ ಆರ್ಭಟ ಜೋರಾಗಿದೆ. ಅದರಂತೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯಾಗುತ್ತಿದ್ದು, ಮಂಗಳವಾರ 8 ತಾಲೂಕುಗಳ ಅಂಗನವಾಡಿ, ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಿಗೆ ರಜೆ ಘೋಷಣೆ ಮಾಡಲಾಗಿದೆ.

ಜಿಲ್ಲೆಯ ಕುಮಟಾ, ಕಾರವಾರ, ಅಂಕೋಲಾ, ಹೊನ್ನಾವರ, ಭಟ್ಕಳ, ಶಿರಸಿ, ಸಿದ್ದಾಪುರ, ಯಲ್ಲಾಪುರ ತಾಲೂಕಿನ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ಲಕ್ಷ್ಮಿಪ್ರಿಯಾ ಅವರು ಆದೇಶಿಸಿದ್ದಾರೆ.

ಜಿಲ್ಲೆಯ ಈ 8 ತಾಲೂಕುಗಳಲ್ಲಿ ಭಾರೀ ಮಳೆಯಾಗುತ್ತಿದೆ. ಇದರಿಂದ ಹಳ್ಳ ಕೊಳ್ಳಗಳು ತುಂಬಿ ಹರಿಯುತ್ತಿವೆ. ಹೀಗಾಗಿ ಮುಂಜಾಗ್ರತೆಯಿಂದ ಜಿಲ್ಲಾಡಳಿತ ಈ ಕ್ರಮ ಕೈಗೊಂಡಿದೆ.

**ಎದೆಯ ಒಳಗೆ ಬಡವರ ಮತ್ತು ಮಧ್ಯಮ ವರ್ಗದವರ ಬಗ್ಗೆ ಪ್ರೀತಿ, ಕಾಳಜಿ ಇಲ್ಲ- ಪ್ರಧಾನಿಯನ್ನು ಅಣಕಿಸಿ ಬಿಜೆಪಿ ಸುಳ್ಳು ಟೀಕಿಸಿದ ಸಿಎಂ**

# 56 ಇಂಚಿನ ಎದೆ useless ಆಗಿದೆ..!

**■ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಅಭಿವೃದ್ಧಿಗೆ ರಾಜ್ಯ ಸರ್ಕಾರದ ಬಳಿ ಹಣ ಇಲ್ಲ ಎನ್ನುವ ಬಿಜೆಪಿಯ ಹಸಿ ಸುಳ್ಳುಗಳಿಗೆ ತಕ್ಕ ಉತ್ತರ ನೀಡುವ ರೀತಿಯಲ್ಲಿ ಒಂದೇ ದಿನ 1350 ಕೋಟಿ ವೆಚ್ಚದ ಅಭಿವೃದ್ಧಿ ಕಾರ್ಯಗಳನ್ನು ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು. ದಾವಣಗೆರೆ ಜಿಲ್ಲೆಯ 1350 ಕೋಟಿ ವಿವಿಧ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಿ ಹಲವು ಇಲಾಖೆಗಳ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಿ ಮಾತನಾಡಿದರು. 56 ಇಂಚಿನ




ಎದೆಯ ಪ್ರಧಾನಿ ಮೋದಿಯವರು useless ಆಗಿದ್ದಾರೆ. ಎದೆ ಎಷ್ಟು ಇಂಚು ಎನ್ನುವುದು ಮುಖ್ಯವಲ್ಲ. ಎದೆಯ ಒಳಗೆ ಬಡವರ ಮತ್ತು ಮಧ್ಯಮ ವರ್ಗದವರ ಬಗ್ಗೆ ಪ್ರೀತಿ, ಕಾಳಜಿ ಇಲ್ಲವಾಗಿದೆ ಎಂದು ಟೀಕಿಸಿದರು. ಸರ್ಕಾರದ ಬಳಿ ಹಣ ಇಲ್ಲ ಎನ್ನುವ ಬಿಜೆಪಿಯ ಕುರುಡು ಕಣ್ಣುಗಳಿಗೆ ಅಭಿವೃದ್ಧಿ ಕಾಣುತ್ತಿಲ್ಲ. ಜನರ ಮನೆ ಬಾಗಿಲಿಗೆ ನಮ್ಮ ಸರ್ಕಾರದ ಅಭಿವೃದ್ಧಿ ಕಾರ್ಯಗಳು ತಲುಪುತ್ತಿವೆ. ನಮ್ಮ ಬಳಿ ಹಣ ಇಲ್ಲದೇ ಹೋಗಿದ್ದರೆ ಒಂದೇ ದಿನ 1350 ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ಸಾಧ್ಯವಿತ್ತೇ ಎಂದು ಪ್ರಶ್ನಿಸಿದರು.

ನಾವು ಗ್ಯಾರಂಟಿಗಳನ್ನು ಘೋಷಿಸಿದಾಗ ಬಿಜೆಪಿಯ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರಿಂದ ಹಿಡಿದು ಸ್ಥಳೀಯ ಬಿಜೆಪಿ ನಾಯಕರವರೆಗೂ, "ಗ್ಯಾರಂಟಿಗಳು ಜಾರಿಯೇ ಆಗುವುದಿಲ್ಲ" ಎಂದು ಹಸಿ ಹಸಿ ಸುಳ್ಳು ಹೇಳಿದ್ದರು. ಈಗ ಐದೂ ಗ್ಯಾರಂಟಿಗಳೂ ಜಾರಿ ಆಗಿವೆ. ಬಿಜೆಪಿಯ ಮತದಾರರೂ ಸೇರಿ ಇಡೀ ರಾಜ್ಯದ ಜನತೆ ಗ್ಯಾರಂಟಿಗಳ ಫಲಾನುಭವಿಗಳಾಗಿದ್ದಾರೆ ಎಂದರು.

ರಾಜ್ಯದ ಬಜೆಟ್ ಗಾತ್ರ ಹೆಚ್ಚಾಗಿರುವುದು ಮಾತ್ರವಲ್ಲದೆ, ಜಿಎಸ್ ಟಿ ಸಂಗ್ರಹದಲ್ಲೂ ರಾಜ್ಯ ದೇಶದಲ್ಲೇ ಎರಡನೇ ಸ್ಥಾನದಲ್ಲಿದೆ. ಇದು ರಾಜ್ಯದ ಆರ್ಥಿಕತೆ ಏರುಮುಖದಲ್ಲಿ, ಪ್ರಗತಿ ಪಥದಲ್ಲಿ ಇರುವುದಕ್ಕೆ ಸಾಕ್ಷಿ ಎಂದರು. ಬಿಜೆಪಿ ಅಧಿಕಾರದಲ್ಲಿದ್ದಾಗ ರಾಜ್ಯದ ಜನರಿಗೆ ಒಂದೇ ಒಂದು ಮನೆ ಕೊಡಲಿಲ್ಲ. ಆದರೆ ನಾವು ಬರೀ ದಾವಣಗೆರೆ ಜಿಲ್ಲೆಯಲ್ಲಿ ಒಂದೇ ದಿನ ಪೌರ ಕಾರ್ಮಿಕ ವರ್ಗಕ್ಕೆ 1892 ಮನೆಗಳನ್ನು ವಿತರಿಸಿದ್ದೇವೆ ಎಂದರು. ಸಮಾಜದ ಎಲ್ಲಾ ಜಾತಿ, ವರ್ಗ ಮತ್ತು ಸಮುದಾಯಗಳಿಗೆ ಆರ್ಥಿಕ ಶಕ್ತಿ ನೀಡುವುದು ನಮ್ಮ ಸರ್ಕಾರದ ಜವಾಬ್ದಾರಿ. ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಶಯದಂತೆ ನಾವು ಸಾಮಾಜಿಕ ನ್ಯಾಯದ ಕಾರ್ಯಗಳನ್ನು ಜಾರಿಗೊಳಿಸುತ್ತಾ ಸಮ ಸಮಾಜದ ಆಶಯವನ್ನು ಈಡೇರಿಸುತ್ತಿದ್ದೇವೆ ಎಂದರು.

# ಮಾದಿಗ ಸಮಾಜದಿಂದ ಪ್ರತಿಭಾ ಪುರಸ್ಕಾರ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕರ್ನಾಟಕ ರಾಜ್ಯ ಮಾದಿಗ ನೌಕರರ ಸಂಘ ಲಕ್ಷ್ಮೇಶ್ವರ/ಶಿರಹಟ್ಟಿ ತಾಲೂಕು ವತಿಯಿಂದ 2024-25ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಶೇ.65ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಬಿಎ, ಬಿಕಾಂ, ಬಿಇ, ಎಂಬಿಬಿಎಸ್, ಬಿಎಎಂಎಸ್, ಡಿ.ಎಡ್, ಬಿ.ಎಡ್, ವೃತ್ತಿಪರ ಕೋರ್ಸ್, ಸ್ನಾತಕೋತ್ತರ ಪದವಿ ಪಡೆದ ಶಿರಹಟ್ಟಿ/ಲಕ್ಷ್ಮೇಶ್ವರ ತಾಲೂಕಿನ ಮಾದಿಗ (ಮಾದರ) ಸಮಾಜದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಜೂನ್ 25 ಅರ್ಜಿ ಸಲ್ಲಿಸಲು ಕೊನೆಯ ದಿನವವಾಗಿದ್ದು, ಅರ್ಜಿಯೊಂದಿಗೆ ಎಸ್‌ಎಸ್‌ಎಲ್‌ಸಿ/ಪಿಯುಸಿ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್‌ಪೋರ್ಟ್ ಭಾವಚಿತ್ರ, ಮೊಬೈಲ್ ನಂಬರ್ ನಮೂದಿಸಬೇಕು ಎಂದು ಮಾದಿಗ ಸಮಜದ ಅಧ್ಯಕ್ಷರಾದ ಆರ್. ಎಫ್. ದೊಡ್ಮನಿ, ಕಾರ್ಯದರ್ಶಿ ಬಿ.ಎಚ್. ನಡುವಿನಮನಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ-9481678148 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

# ಹಿರಿಯ ನಾಗರಿಕರ ಮೇಲಿನ ದೌರ್ಜನ್ಯ ತಡೆಗಟ್ಟಿ



**■ವಿಜಯಸಾಕ್ಷಿ ಸುದ್ದಿ, ರೋಣ**

ರಾಜ್ಯಾದ್ಯಂತ ಹಿರಿಯ ನಾಗರಿಕರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ತಡೆಗಟ್ಟುವ ಮೂಲಕ ಸ್ವಸ್ಥ ಸಮಾಜವನ್ನು ನಿರ್ಮಿಸಬೇಕು ಎಂದು ಆಗ್ರಹಿಸಿ ಸೋಮವಾರ ರೋಣ ತಾಲೂಕಾ ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು ತಹಸೀಲ್ದಾರ ನಾಗರಾಜ ಕೆ ಅವರಿಗೆ ಮನವಿ ಸಲ್ಲಿಸಿದರು. ಪ್ರತಿ ವರ್ಷ ಜು. 15ರಂದು ಹಿರಿಯ ನಾಗರಿಕರ ದೌರ್ಜನ್ಯ ತಡೆ ದಿನಾಚರಣೆ ಎಂದು ಘೋಷಿಸಿ ನಾಗರಿಕ ಸಮಾಜದಲ್ಲಿ ಜಾಗೃತಿಯನ್ನು ಮೂಡಿಸಬೇಕು ಎನ್ನುವ ವಿಚಾರ ಕೇವಲ ದಾಖಲೆಗಳಲ್ಲಿ ಮಾತ್ರ ಅಡಕವಾಗಿದ್ದು, ಇದುವರೆಗೂ ಜಾರಿಗೆ ತಂದಿಲ್ಲ.

ಸರಕಾರ ಮತ್ತು ಅಧಿಕಾರಿಗಳು ಕೂಡಲೇ ದೌರ್ಜನ್ಯ ತಡೆ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಹಿರಿಯ ನಾಗರಿಕರಲ್ಲಿ ಭದ್ರತೆಯನ್ನು ಮೂಡಿಸಬೇಕು ಎಂದು ಆಗ್ರಹಿಸಿದರು. ಅಧ್ಯಕ್ಷ ಎ.ಎಸ್. ಖತೀಬ, ಎಸ್.ಎಫ್. ಹಂಚಿನಾಳ, ಬಿ.ಎಚ್. ನಾಯಕ, ಕೆ.ಎಸ್. ಬಾರಕೇರ, ಬಿ.ಪಿ. ಅತ್ತಿಗೇರಿ, ಎಮ್.ಎಸ್. ಹಾದಿಮನಿ, ಎಸ್.ಪಿ. ರಾಟಿಮನಿ, ಎಸ್.ಪಿ. ಹುನಗುಂಡಿ ಸೇರಿದಂತೆ ನಿವೃತ್ತ ನೌಕರರು ಉಪಸ್ಥಿತರಿದ್ದರು.

# ಸರಕಾರಿ ಪದವಿ ಕಾಲೇಜು ಆರಂಭಿಸಲು ಒತ್ತಾಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಸರಕಾರಿ ಪ್ರಥಮದರ್ಜೆ ಕಾಲೇಜು ಪ್ರಾರಂಭಿಸುವಂತೆ ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ನಿರ್ಮೂಲನಾ ಸಂಸ್ಥೆಯ ತಾಲೂಕಾಧ್ಯಕ್ಷ ಸೋಮಣ್ಣ ಬೆಟಗೇರಿ ಹಾಗೂ ಗ್ರಾ.ಪಂ ಸದಸ್ಯ ಪದ್ಮರಾಜ ಪಾಟೀಲ ಸರಕಾರವನ್ನು ಒತ್ತಾಯಿಸಿದ್ದಾರೆ.

ಅವರು ಪತ್ರಿಕಾ ಹೇಳಿಕೆ ನೀಡಿ, ಲಕ್ಷ್ಮೇಶ್ವರ ತಾಲೂಕು ಕೇಂದ್ರದವಾಗಿ ಗದಗ ಜಿಲ್ಲೆಯಲ್ಲಿಯೇ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಪಟ್ಟಣವಾಗಿದ್ದರೂ ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ರಸ್ತೆ ಹೀಗೆ ಹತ್ತಾರು ಪ್ರಮುಖ ಮೂಲಭೂತ ಸೌಲಭ್ಯದಿಂದ ವಂಚಿತವಾಗಿಯೇ ಉಳಿದಿದೆ. 50 ಸಾವಿರದಷ್ಟು ಜನಸಂಖ್ಯೆಯನ್ನು ಹೊಂದಿರುವ ಲಕ್ಷ್ಮೇಶ್ವರ ಪಟ್ಟಣ ತಾಲೂಕಿನ 4 ಗ್ರಾಮಗಳ ಜತೆಗೆ ನೆರೆಯ ಕುಂದಗೋಳ, ಸವಣೂರ, ಶಿಗ್ಗಾಂವ, ಶಿರಹಟ್ಟಿ, ಗದಗ ತಾಲೂಕಿನ ಜನರಿಗೂ ಕೇಂದ್ರ ಸ್ಥಾನವಾಗಿದ್ದರೂ ಸರಕಾರಿ ಪ್ರಥಮ ದರ್ಜೆ(ಪದವಿ) ಕಾಲೇಜು ಇಲ್ಲದಿರುವದು ದುರದೃಷ್ಟಕರ ಸಂಗತಿಯಾಗಿದೆ. ಪಿಯುಸಿ ನಂತರ ಬಿಎ, ಬಿಕಾಂ, ಬಿಎಸ್ಸಿ, ಬಿಬಿಎ, ಬಿಸಿಎ, ನರ್ಸಿಂಗ್ ಇತ್ಯಾದಿ ಶಿಕ್ಷಣ ಪಡೆಯಬೇಕೆನ್ನುವ ಬಡ ಮತ್ತು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಅನಿವಾರ್ಯವಾಗಿ ದೂರದ ಗದಗ, ಸವಣೂರ, ಹುಬ್ಬಳ್ಳಿ ಮತ್ತಿತರರ ಕಡೆ ಹೋಗುತ್ತಾರೆ. ಅನೇಕ ವಿದ್ಯಾರ್ಥಿಗಳು ಪದವಿ ಶಿಕ್ಷಣದಿಂದ ದೂರ ಉಳಿಯುತ್ತಿದ್ದಾರೆ. ಲಕ್ಷ್ಮೇಶ್ವರದಲ್ಲಿ ಸರ್ಕಾರ, ಪುರಸಭೆ ಮತ್ತು ಖಾಸಗಿ ಸಂಸ್ಥೆಗಳ ನಾಲ್ಕೈದು ಪಿಯು ಕಾಲೇಜುಗಳಿದ್ದು, ಸರ್ಕಾರಿ ಪದವಿ ಕಾಲೇಜಿನ ಅಗತ್ಯತೆ ಸಾಕಷ್ಟಿದೆ.

ಈ ನಿಟ್ಟಿನಲ್ಲಿ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಉನ್ನತ ಶಿಕ್ಷಣ ಸಚಿವರು ಆದಷ್ಟು ಬೇಗ ಪಟ್ಟಣದಲ್ಲಿ ಸರಕಾರಿ ಪದವಿ ಕಾಲೇಜು ಪ್ರಾರಂಭಿಸುವ ಕುರಿತು ಆದೇಶ ಹೊರಡಿಸಬೇಕು. ಸರಕಾರದ ಮೇಲೆ ಒತ್ತಡ ತರುವ ಮೂಲಕ ಮಕ್ಕಳಿಗೆ ಅನೂಕೂಲ ಮಾಡಿಕೊಡಬೇಕು ಎಂದು ಅಬ್ದುಲ್ ರಿತ್ತಿ, ಮುದಕಣ್ಣ ಗದ್ದಿ, ಮುತ್ತಣ್ಣ ಟೋಕಾಳಿ, ಸೋಮಶೇಖರ ಪಾಟೀಲ, ಮಂಜಪ್ಪ ಶರಸೂರಿ ಮುಂತಾದವರು ಒತ್ತಾಯಿಸಿದ್ದಾರೆ.

**ಎಎಚ್‌ಎಚ್ ಪದವಿ ಕಾಲೇಜಿನ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಡಾ. ಎಂ ಸುರೇಶ್ ಅಭಿಪ್ರಾಯ**

# ಸ್ವಾವಲಂಬಿ ಬದುಕಿಗೆ ಗುಣಾತ್ಮಕ ಶಿಕ್ಷಣ ಅತ್ಯಗತ್ಯ

**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**

ಸ್ಪರ್ಧಾತ್ಮಕ ಯುಗದಲ್ಲಿ ಜಗತ್ತು ನಾಗಾಲೋಟದಲ್ಲಿ ಓಡುತ್ತಿದೆ. ಆ ವೇಗದ ಜತೆ-ಗೆ ಹೆಜ್ಜೆ ಹಾಕುವ ಮೂಲಕ ಸ್ವಾವಲಂಬಿ ಕಟ್ಟಿಕೊಳ್ಳಬೇಕಾದರೆ ಗುಣಾತ್ಮಕ ಶಿಕ್ಷಣದ ಅತ್ಯಗತ್ಯ ಜರೂರಾಗಬೇಕಾಗಿದೆ ಎಂದು ಅರಸೀಕೆರೆ ಗ್ರಾಮದ ವೈ. ಅಣ್ಣಪ್ಪ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಎಂ. ಸುರೇಶ್ ಅಭಿಪ್ರಾಯಪಟ್ಟರು.

ತಾಲೂಕಿನ ಅರಸೀಕೆರೆ ಗ್ರಾಮದ ಎಎಚ್‌ಎಎಚ್ ಪದವಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ತೃತೀಯ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳ ಶಾರದಾ ಪೂಜೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೇವಲ ಅಂಕ ಗಳಿಕೆಯಿಂದಲೇ ಉದ್ಯೋಗ ಪಡೆಯಬಹುದಾಗಿದ್ದ ಒಂದು ಕಾಲ ಈಗ ಮುಗಿದ ಅಧ್ಯಾಯ. ಈ ಕ್ಷಣದಲ್ಲಿ ಅಂಕ ಗಳಿಕೆಯ ಜತೆಗೆ, ಸ್ಪರ್ಧಾತ್ಮಕ ಜಗತ್ತಿಗೆ ಪೂರಕವಾಗಬಲ್ಲ ಜ್ಞಾನ




ಸಂಪಾದನೆಯ ಸವಾಲುಗಳು ನಮ್ಮನ್ನು ಸುತ್ತುವರೆದಿವೆ. ಹೀಗಾಗಿ, ಅಂಕಗಳಿಕೆಯ ಜತೆಗೆ, ಸ್ಪರ್ಧಾತ್ಮಕ ಪರೀಕ್ಷೆಗಳ ಸಮರ್ಥವಾಗಿ ಎದುರಿಸಬಲ್ಲ ಜ್ಞಾನಾರ್ಜನೆಯನ್ನು ಪಡೆಯಬೇಕಾಗಿದೆ. ಹಾಗಾದಾಗ ಮಾತ್ರ, ಸ್ವಾವಲಂಬನೆಯ ಬದುಕು ಕಟ್ಟಿಕೊಳ್ಳಲು ಸಾಧ್ಯ. ಒಳ್ಳೆಯ ಸ್ಥಾನಮಾನಗಳು ನಮ್ಮನ್ನು ಸ್ವಾಗತಿಸುತ್ತಿವೆ ಎಂದು ಡಾ. ಸುರೇಶ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸ್ಥಳೀಯ ಎಸ್‌ಎಂಸಿಕೆ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಪಿ. ದುರುಗೇಶ್ ಮಾತನಾಡಿ, ಕ್ಷಣ ಕ್ಷಣಕ್ಕೂ ಜಗತ್ತು ಬದಲಾವಣೆಯ ಪಥಕ್ಕೆ ಮಗ್ಗಲು ಬದಲಾಯುತ್ತಿರುತ್ತದೆ. ಹೀಗಾಗಿ, ಆ ಬದಲಾವಣೆಗೆ ಅನುಗುಣವಾಗಿ, ನಾವು ಬದಲಾಗುವ ಮೂಲಕ ಬದುಕು ಕಟ್ಟಿಕೊಳ್ಳಬೇಕಾಗಿದೆ. ಗುರು- ಹಿರಿಯರಿಗೆ ಗೌರವಿಸುವ, ಜತೆಗೆ, ನಮ್ಮ ಬದುಕು ರೂಪಿಸಲು ಹೆಣಗಾಡುತ್ತಿರುವ ತಂದೆ- ತಾಯಿಗಳಿಗೆ ಪ್ರೀತಿಯಿಂದ ನಡೆದುಕೊಳ್ಳುವ ಮೂಲಕ ವ್ಯಾಸಂಗದಲ್ಲಿ ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು.

ಗ್ರಾಮದ ಹಿರಿಯರಾದ ಎ.ಎಚ್. ಪಂಪಣ್ಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಪ್ರಾಂಶುಪಾಲ ಎ.ಎಚ್. ಉಮೇಶ್, ಹರಪನಹಳ್ಳಿ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ಹಾರಾಳ್ ಬುಳ್ಳಪ್ಪ, ಮುಖಂಡರಾದ ಎ.ಎಚ್. ಬಸವರಾಜಪ್ಪ, ಗುರುಶಾಂತನಗೌಡ, ಎ.ಎಚ್. ಮಲ್ಲಿಕಾರ್ಜುನ, ಪೂಜಾರ ಮರಿಯಪ್ಪ, ಎ.ಎಚ್. ನಾಗರಾಜ, ಬನ್ನಿಮಟ್ಟಿ ಸಿದ್ದಪ್ಪ, ಎ.ಎಚ್. ವಿಶ್ವನಾಥ, ವಾಗೀಶ್, ರಾಕೇಶ್, ಉಪನ್ಯಾಸಕರಾದ ವಿದ್ಯಾ, ಗೀತಾ, ಡಾ. ಚಂದ್ರಪ್ಪ, ಕಾಂತೇಶ್ ಇತರರು ಇದ್ದರು. ಇದೇ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಿ, ಸತ್ಕರಿಸಲಾಯಿತು. ಬಳಿಕ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

> ಉತ್ತಮ ಅಂಕ ಗಳಿಸಿದರಷ್ಟೇ ನಮ್ಮನ್ನು ಉದ್ಯೋಗಗಳು ರಕ್ತಗಂಬಳಿ ಹಾಸಿ ಸ್ವಾಗತಿಸಲಾರವು. ಅದರಾಚೆ, ಸ್ಪರ್ಧಾತ್ಮಕ ಪರೀಕ್ಷೆಯನ್ನು ಎದುರಿಸುವ ಮೂಲಕ ಉದ್ಯೋಗಗಳನ್ನು ಪಡೆಯಬೇಕಾಗದ ಅನಿವಾರ್ಯತೆ ಎದುರಾಗಿದೆ. ಹೀಗಾಗಿ, ಯುವಜನ ಸಮೂಹ, ಕಲಿಕೆಯ ಹಂತದಲ್ಲಿ ಮೋಜು, ಮಸ್ತಿ ಹಾಗೂ ಮೊಬೈಲ್‌ಗಳ ಮಾಯಜಾಲಕ್ಕೆ ಸಿಲುಕದೆ, ಸ್ಪರ್ಧಾತ್ಮಕ ಕಲಿಯುವಿಕೆಯತ್ತ ಗಮನ ಹರಿಸಲಿ.
>
> **-ಡಾ.ಎಂ. ಸುರೇಶ್, ಪ್ರಾಂಶುಪಾಲರು,**
> ವೈ. ಅಣ್ಣಪ್ಪ ಪದವಿ ಮಹಾವಿದ್ಯಾಲಯ.

# ವಿದ್ಯಾರ್ಥಿ ಜೀವನ ಅತ್ಯಮೂಲ್ಯ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜೀವನದಲ್ಲಿ ಯಶಸ್ಸು ಗಳಿಸಲು ವಿದ್ಯೆಯ ಜೊತೆಗೆ ಆತ್ಮವಿಶ್ವಾಸ ಮುಖ್ಯವಾಗಿದೆ. ನಮ್ಮ ಅಂತರಾತ್ಮದ ಅರಿವಿನ ಮೂಲಕ ನಾವು ಸಂಪಾದಿಸಿದ ಜ್ಞಾನವನ್ನು ಸಮಾಜದ ಒಳಿತಿಗೆ ಬಳಕೆ ಮಾಡಬೇಕು ಎಂದು ಸರಕಾರಿ ಪಿಯು ಕಾಲೇಜಿನ ಪ್ರಾಚಾರ್ಯ ಎಸ್.ಸಿ. ಗುಳಗಣ್ಣವರ ಹೇಳಿದರು.

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದಲ್ಲಿ ಶುಕ್ರವಾರ ನಡೆದ 2024-25ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್‌ಎಸ್‌ಎಸ್, ರೆಡ್‌ಕ್ರಾಸ್, ರೋವರ್ಸ್, ರೇಂಜರ್ಸ್ ಚಟುವಟಿಕೆಗಳ ಸಮಾರೋಪ ಹಾಗೂ ಪದವಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಉಪನ್ಯಾಸ ನೀಡಿದರು.

ವಿದ್ಯಾರ್ಥಿಗಳು ಹೆತ್ತ ತಂದೆ-ತಾಯಿ, ಕಲಿತ ಶಾಲೆ, ಕಲಿಸಿದ ಗುರು ಮತ್ತು ಹೊತ್ತ ಭೂಮಿಯ ಋಣ ತೀರಿಸಬೇಕಾದರೆ ಸಮಾಜ ಮೆಚ್ಚುವ ರೀತಿಯಲ್ಲಿ ಉತ್ತಮ ಪ್ರಜೆಗಳಾಗಬೇಕು. ವಿದ್ಯಾರ್ಥಿ ಜೀವನ ಅತ್ಯಂತ ಅಮೂಲ್ಯವಾದದ್ದು. ಓದುವ ಸಮಯದಲ್ಲಿ ಕಾಲಹರಣ ಮಾಡಿದರೆ ಕಷ್ಟ ಕಟ್ಟಿಟ್ಟ ಬುತ್ತಿ ಎಂಬುದನ್ನು ಮರೆಯಬಾರದು ಎಂದರು. ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಎಂ.ಎಸ್. ಧಡೆಸೂರಮಠ, ಪ್ರಾಂಶುಪಾಲ ಎಸ್.ಎಲ್. ಗುಳೇದಗುಡ್ಡ ಮಾತನಾಡಿದರು.

ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಣೆ ಮಾಡಲಾಯಿತು. ಸಾಧಕರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಶರಣಪ್ಪ ಕುರಿ, ದಾವುದ್ ಅಲಿ ಕುದರಿ, ವೀರಪ್ಪ ಜಿರ್ಲ, ಆನಂದ ನಡುವಲಕೇರಿ, ಬಸೀರಾಬಾನು ಅಲ್ಲಾಬಕ್ಷಿ ನದಾಫ್, ರೇಣುಕಾ ಧರ್ಮಾಯತ, ಈ.ಆರ್. ಲಗಳೂರ, ಸಜಿಲಾ, ಸಾಂಸ್ಕೃತಿಕ ಸಂಚಾಲಕ ಎಸ್.ಎಸ್. ಸೂಡಿ, ಐಕ್ಯೂಎಸಿ ಸಂಚಾಲಕಿ ಜಯಶ್ರೀ ಮುತಗಾರ, ಕ್ರೀಡಾ ವಿಭಾಗದ ಸಂಚಾಲಕಿ ಕಾಂಚನಮಾಲಾ ಪಾಟೀಲ, ಎನ್‌ಎಸ್‌ಎಸ್ ಸಂಚಾಲಕರಾದ ಎಸ್.ಪಿ. ಕುರೇರ, ಎಸ್.ಎಸ್. ಮುಂಜಿ ಇದ್ದರು.

# ಧರೆಗುರುಳಿದ ಬೃಹತ್ ಮರ



■ವಿಜಯಸಾಕ್ಷಿ ಸುದ್ದಿ, ರೋಣ
ರೋಣ-ಹುಬ್ಬಳ್ಳಿ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಎಂಆರ್‌ಬಿಸಿ ಪ್ರವಾಸಿ ಮಂದಿರದ ಬಳಿ ಗಾಳಿಗೆ ಬೃಹದಾಕಾರದ ಮರವೊಂದು ಸೋಮವಾರ ಮಧ್ಯಾಹ್ನ ನೆಲಕಚ್ಚಿದೆ.

ರೋಣದಿಂದ ಹುಬ್ಬಳ್ಳಿಗೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆ ಇದಾಗಿದ್ದು, ನಿತ್ಯ ಸಾವಿರಾರು ವಾಹನಗಳು ಈ ರಸ್ತೆಯ ಮೂಲಕ ಸಂಚರಿಸುತ್ತವೆ. ಸಾರಿಗೆ ಬಸ್ಸೊಂದು ಇದೇ ಮಾರ್ಗದಲ್ಲಿ ಮುಂದಕ್ಕೆ ಸಾಗಿದ ಕ್ಷಣಾರ್ಧದಲ್ಲಿ ವಿದ್ಯುತ್ ತಂತಿಗಳೊಂದಿಗೆ ಬೃಹತ್ ಮರ ನೆಲಕ್ಕುರುಳಿದ್ದು, ಕೂದಲೆಳೆ ಅಂತರದಲ್ಲಿ ಭಾರೀ ಅನಾಹುತ ತಪ್ಪಿದೆ.

ಸುದ್ದಿ ತಿಳಿದ ತಕ್ಷಣ ಸ್ಥಳಕ್ಕೆ ಧಾವಿಸಿದ ಪೊಲೀಸ್ ಸಿಬ್ಬಂದಿ ಆನಂದ ಮೇಟಿ ಹಾಗೂ ಪ್ರವಾಸಿ ಮಂದಿರದ ಸಿಬ್ಬಂದಿ ಯಲ್ಲಪ್ಪ ಹೆಸ್ಕಾಂ ಅಧಿಕಾರಿಗಳಿಗೆ ಘಟನೆ ಬಗ್ಗೆ ವಿವರಿಸಿದರು. ಕೆಲ ನಿಮಿಷಗಳಲ್ಲಿ ಆಗಮಿಸಿದ ಹೆಸ್ಕಾಂ ಸಿಬ್ಬಂದಿಗಳು ವಿದ್ಯುತ್ ಪೂರೈಕೆಯನ್ನು ಸ್ಥಗಿತಗೊಳಿಸಿ ರಸ್ತೆ ಸಂಚಾರವನ್ನು ಸುಗಮಗೊಳಿಸುವಲ್ಲಿ ನೆರವಾದರು.

## ಅರ್ಧಕ್ಕೇ ನಿಂತ ಗ್ರಾಮ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗಿನ ರಸ್ತೆ ಕಾಮಗಾರಿ

# ಇದು ರಸ್ತೆಯಲ್ಲ, ಕೆಸರು ಗದ್ದೆ!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ
ಪಟ್ಟಣದ ಮುಖ್ಯ ಬಜಾರ್ ರಸ್ತೆ ಅಭಿವೃದ್ಧಿ ಕಾಮಗಾರಿ ಸ್ಥಗಿತಗೊಂಡಿದ್ದರಿಂದ ಸಾರ್ವಜನಿಕರು ನಿತ್ಯ ಪರದಾಡುವಂತಾಗಿದೆ. ಪಟ್ಟಣದ ಮುಖ್ಯ ಬಜಾರ್ ರಸ್ತೆಯ ಗ್ರಾಮ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗಿನ ರಸ್ತೆ ಕಾಮಗಾರಿ ಅರ್ಧಕ್ಕೆ ನಿಂತಿರುವದರಿಂದ ನಿತ್ಯ ಸಾರ್ವಜನಿಕರು ಆಡಳಿತವನ್ನು ಶಪಿಸುವಂತಾಗಿದೆ.

ಪುರಸಭೆ 15ನೇ ಹಣಕಾಸಿನ 76 ಲಕ್ಷ ರೂ ಅನುದಾನದಲ್ಲಿ ಮುಖ್ಯ ಬಜಾರ್ ರಸ್ತೆಯ ಗ್ರಾಮ ಚಾವಡಿಯಿಂದ ಭರಮದೇವರ ಸರ್ಕಲ್‌ವರೆಗಿನ 260 ಮೀಟರ್ ರಸ್ತೆ ಅಭಿವೃದ್ಧಿ (ಸಿಸಿ) ಕಾಮಗಾರಿಗೆ ಶಾಸಕ ಡಾ. ಚಂದ್ರು ಲಮಾಣಿ ಎಪ್ರಿಲ್‌ನಲ್ಲಿ ಭೂಮಿಪೂಜೆ ನೆರವೇರಿಸಿದ್ದರು. ಅದಾದ 2-3 ದಿನಗಳಿಗೆ ಕಾಮಗಾರಿ ಪ್ರಾರಂಭಿಸಲಾಯಿತು. ಆಗ ಗುತ್ತಿಗೆದಾರರು ತ್ವರಿತಗತಿಯಿಂದ ಕಾರ್ಯ ಕೈಗೆತ್ತಿಕೊಂಡು 260 ಮೀ ರಸ್ತೆಯ ನಿಗದಿತ ಅಳತೆಯನ್ನು



ಅಗೆದು ಹಾಕಿದ್ದು, ಅಂದಿನಿಂದಲೇ ಕೆಲಸ ಸ್ಥಗಿತಗೊಂಡಿದ್ದು ಏಕೆ ಎನ್ನುವದು ಮಾತ್ರ ಪ್ರಶ್ನೆಯಾಗಿಯೇ ಉಳಿದಿದೆ.

ಅರ್ಧಂಬರ್ಧ ರಸ್ತೆ ಅಗೆದು ಕೈ ಬಿಟ್ಟಿದ್ದ ಸಂದರ್ಭದಲ್ಲಿ ಸಾರ್ವಜನಿಕರ ಒತ್ತಾಯದಿಂದ ಅಗೆದ ರಸ್ತೆಗೆ ಮಣ್ಣು ಹಾಕಲು ಪ್ರಾರಂಭಿಸಿದ್ದರು. ಆದರೆ ಈ ವೇಳೆ ರಸ್ತೆಗೆ ಹಾಕಲು ಬಳಸುತ್ತಿರುವ ಮಣ್ಣು ಸಂಪೂರ್ಣ ಕಳಪೆಯಾಗಿದ್ದು, ಉತ್ತಮ ಗುಣಮಟ್ಟದ ಕೆಂಪು ಗೊರಸು ಹಾಕುವಂತೆ ಸಾರ್ವಜನಿಕರು ಒತ್ತಾಯಿಸಿದಾಗ, ಸ್ಥಳಕ್ಕೆ ಆಗಮಿಸಿದ್ದ ಪುರಸಭೆ ಅಧ್ಯಕ್ಷೆ ಹಾಗೂ ಮುಖ್ಯಾಧಿಕಾರಿಗಳು ಮಣ್ಣು ಪರೀಕ್ಷೆ ಮಾಡಿಸಿ ನಂತರ ಕಾಮಗಾರಿ ಮಾಡುವದಾಗಿ ಮನವರಿಕೆ ಮಾಡಿದ್ದರು. ಆದರೆ ಅದಾಗಿ 15-20 ದಿನಗಳಾದರೂ ಕೆಲಸ ಅಲ್ಲಿಂದ ಮುಂದೆ ಕದಲದೇ ಇರುವುದು ಜನರ ಆಕ್ರೋಶಕ್ಕೆ ಕಾರಣವಾಗುವಂತಾಗಿದೆ.

ಈ ರೀತಿ ರಸ್ತೆ ಅಗೆದು ಸಂಪರ್ಕ ರಸ್ತೆಗಳಿಂದ ಬರದಂತೆ ಮಣ್ಣು ಹಾಕಿದ್ದರಿಂದ ಇಲ್ಲಿನ ವ್ಯಾಪಾರಸ್ಥರಿಗೆ ಗ್ರಾಹಕರು ಬಾರದಂತಾಗಿದೆ. ಈ ಮುಖ್ಯ ರಸ್ತೆ ಸಂಪರ್ಕ ಕಳೆದ ಎರಡು ತಿಂಗಳಿಂದ ಸಂಪೂರ್ಣ ಕಡಿತಗೊಂಡಿದ್ದರಿಂದ ರೈತರು, ವ್ಯಾಪಾರಸ್ಥರು, ಜನಸಾಮಾನ್ಯರು, ಶಾಲಾ ಮಕ್ಕಳು, ರೋಗಿಗಳು, ವೃದ್ಧರು, ಅಟೋ ಚಾಲಕರ ಪರಿಸ್ಥಿತಿ ಹೇಳತೀರದಾಗಿದೆ.

ಕಳೆದ ಒಂದು ವಾರದ ಹಿಂದೆ ಪೇಟೆ ವ್ಯಾಪಾರಸ್ಥರು ಪುರಸಭೆಯ ನಿರ್ಲಕ್ಷ್ಯಕ್ಕೆ ಅಕ್ರೋಶಗೊಂಡು ಪುರಸಭೆಗೆ ದೌಡಾಯಿಸಿ ಅಧಿಕಾರಿಗಳನ್ನು ತರಾಟೆಗೆ ತೆ-ಗೆದುಕೊಂಡು ಒಂದು ವಾರದ ಗಡುವು ನೀಡಿದ್ದು, ಇಲ್ಲದಿದ್ದಲ್ಲಿ ಅಂಗಡಿಗಳನ್ನು ಬಂದ್ ಮಾಡಿ ಪುರಸಭೆ ಎದುರಿನಲ್ಲಿ ಪ್ರತಿಭಟನೆ ಮಾಡುವದಾಗಿ ಎಚ್ಚರಿಸಿದ್ದಾರೆ. ಈಗಾಗಲೇ ಗಡುವು ನೀಡಿದ ಸಮಯ ಮುಗಿದಿದ್ದು, ಮುಂದೆ ವ್ಯಾಪಾರಸ್ಥರ ತೀರ್ಮಾನ ಏನಾಗುವದೋ ಎಂಬುದನ್ನು ಕಾಯ್ದು ನೋಡಬೇಕಿದೆ.

ರಸ್ತೆ ಅಗೆದು ಹಾಕಿರುವದರಿಂದ ಜನರಿಗೆ ಅಂಗಡಿಗಳಿಗೆ ಬರಲು ತೊಂದರೆಯಾಗುತ್ತಿದೆ. ಕೆಲವು ವ್ಯಾಪಾರಸ್ಥರು ಸೋಮವಾರ ಸ್ವತಃ ಖರ್ಚು ಮಾಡಿ ಅಗೆದ ರಸ್ತೆಗೆ ಅಲ್ಲಿಯೇ ಇದ್ದ ಮಣ್ಣನ್ನು ಜೆಸಿಬಿ ಮೂಲಕ ಹಾಕಿಕೊಂಡು ಸಂಪರ್ಕ ಕಲ್ಪಿಸಿಕೊಳ್ಳುತ್ತಿದ್ದಾರೆ.

> ಕಾಮಗಾರಿಗೆ ಬಳಸುವ ಮಣ್ಣು ಕಳಪೆಯಾಗಿದೆ ಎಂಬ ದೂರಿನ ಹಿನ್ನೆಲೆಯಲ್ಲಿ ಮಣ್ಣಿನ ಗುಣಮಟ್ಟದ ಪರೀಕ್ಷೆಗಾಗಿ ಕಳುಹಿಸಲಾಗಿತ್ತು. ಅದರ ವರದಿ ಬಂದಿದ್ದು, ಜನರು ಈಗ ಹಾಕಲು ಉದ್ದೇಶಿಸಿರುವ ಮಣ್ಣಿಗೆ ವಿರೋಧ ವ್ಯಕ್ತಪಡಿಸಿದ್ದರಿಂದ ಬೇರೆ ಮಣ್ಣನ್ನೇ ಹಾಕಲಾಗುವದು. ವ್ಯಾಪಾರಸ್ಥರು ನೀಡಿದ ಗಡುವಿನೊಳಗೆ ಕಾಮಗಾರಿ ಪ್ರಾರಂಭಿಸಲಾಗುತ್ತಿತ್ತು, ಆದರೆ ಮಳೆಯ ಹಿನ್ನೆಲೆಯಲ್ಲಿ ವಿಳಂಬವಾಗಿದೆ. ಎರಡು ದಿನಗಳಲ್ಲಿ ಕಾಮಗಾರಿ ಪ್ರಾರಂಭಿಸಿ ಶೀಘ್ರದಲ್ಲಿ ಮುಕ್ತಾಯಗೊಳಿಸಲಾಗುವದು.
> **- ಮಹೇಶ ಹಡಪದ.**
> ಪುರಸಭೆ ಮುಖ್ಯಾಧಿಕಾರಿ.






**ಗದಗ:** ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ದಾನಶೂರ ಬಸರಿಗಿಡದ ವೀರಪ್ಪನವರ ಕುಟುಂಬದವರಿಂದ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಕಲ್ಲಯ್ಯಜ್ಜನವರಿಗೆ ತುಲಾಭಾರ ಸೇವೆ ಜರುಗಿತು. ಈ ಸಂದರ್ಭದಲ್ಲಿ ವಿವಿಧ ಮಠಾಧೀಶರುಗಳು ಹಾಗೂ ಬಸರಗಿಡದ ವೀರಪ್ಪನವರ ಕುಟುಂಬ ವರ್ಗದವರಿದ್ದರು.

# ಪ್ರದೀಪಕುಮಾರ ಗೋಡಿ ಅವರಿಗೆ 'ಸೇವಾ ಸಾಧಕ' ಪ್ರಶಸ್ತಿ ಪ್ರದಾನ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ
ಪ್ರೆಸ್ ಕ್ಲಬ್ ಕೌನ್ಸಿಲ್ (ರಿ) ಬೆಂಗಳೂರು ಇದರ ಉದ್ಘಾಟನೆ ಮತ್ತು ಅಮೃತ ಘಳಿಗೆ ಕವನ ಸಂಕಲನ ಬಿಡುಗಡೆ ಕಾರ್ಯಕ್ರಮವು ಬೆಂಗಳೂರಿನ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಆಯೋಜಿಸಲಾಗಿತ್ತು. ರಾಜ್ಯ ಹೈಕೋರ್ಟಿನ ಮುಖ್ಯ ನ್ಯಾಯಮೂರ್ತಿ ವಿಶ್ರಾಂತ ನ್ಯಾಯಧೀಶರಾದ ಅರಳಿ ನಾಗರಾಜ್, ನೆಲಮಂಗಲ ಶಾಸಕ ಎನ್.ಶ್ರೀನಿವಾಸ ಜಂಟಿಯಾಗಿ ಕಾರ್ಯಕ್ರಮವನ್ನು ಉದ್ಘಾಸಿದರು. ಲಕ್ಷ್ಮೀ ಶ್ರೀನಾವಸ ಗೂರೂಜಿ ಸಾನಿಧ್ಯ ವಹಿಸಿದ್ದರು. ರಾ.ಕ.ಸಾ.ಪ ಅಧ್ಯಕ್ಷ ನಾಡೋಜ ಡಾ. ಮಹೇಶ್ ಜೋಶಿ ಹಾಗೂ ರಾ.ಪ್ರೆಸ್ ಕ್ಲಬ್ ಕೌನ್ಸಿಲ್ ಅಧ್ಯಕ್ಷ ಆರ್.ರಾಘವೇಂದ್ರಾಚಾರ್ ಅಧ್ಯಕ್ಷತೆ ವಹಿಸಿದ್ದರು. ಸಂಘಟಕರಾದ ಡಾ.ಎಸ್. ಬಾಲಾಜಿ ಹಾಗೂ ಕನ್ನಡ ಚಲನಚಿತ್ರ ನಟ ಅಹಿಂಸಾ ಚೇತನ್ ಅವರು "ಅಮೃತ ಘಳಿಗೆ" ವಿನೂತನವಾದ ಕವನ ಸಂಕಲವನ್ನು ಬಿಡುಗಡೆಗೊಳಿಸಿದರು.

ತದನಂತರ ನಡೆದ ರಾಜ್ಯದ ಸಾಧಕರನ್ನು ಗುರುತಿಸುವ ಕಾರ್ಯಕ್ರಮದಲ್ಲಿ ಕೊಪ್ಪಳದ ಯುವ ಪತ್ರಕರ್ತ ಹಾಗೂ ಗೋಡಿ ಟೆಕ್ನಾಲಜಿ ಸಂಸ್ಥಾಪಕ "ಪ್ರದೀಪಕುಮಾರ ಗೋಡಿ" ಅವರನ್ನು ವಿಶೇಷ ಸಾಧಕರೆಂದು ಪರಿಗಣಿಸಿ, ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಲಾಯಿತು. ಪ್ರದೀಪಕುಮಾರ ಗೋಡಿ ಅವರ ಸೇವಾನಿಷ್ಠೆಯ "ಸೇವಾ ಸಾಧಕ" ಎಂದು ತಿಳಿದು ನಾಡಿನ ವಿವಿಧ ಸಂಘಟನೆ ಮತ್ತು ಗೆಳೆಯರ ಬಳಗ ಅಭಿನಂದನೆ ವ್ಯಕ್ತಪಡಿಸಿದೆ.

# ಹಿರಿಯ ನಾಗರಿಕರನ್ನು ರಾಷ್ಟ್ರದ ಸಂಪತ್ತು ಎಂದು ಘೋಷಿಸಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ
ಹೆಚ್ಚುತ್ತಿರುವ ಹಿರಿಯ ನಾಗರಿಕರ ಮೇಲಿನ ದೌರ್ಜನ್ಯದ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರಕಾರಗಳು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಇತರ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ನಿವೃತ್ತ ಸರಕಾರಿ ನೌಕರರ ಹಾಗೂ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರಧಾನಮಂತ್ರಿ ಹಾಗೂ ಮುಖ್ಯಮಂತ್ರಿಗಳಿಗೆ ತಹಸೀಲ್ದಾರ ವಾಸುದೇವ ಸ್ವಾಮಿ ಮೂಲಕ ಮನವಿ ಸಲ್ಲಿಸಲಾಯಿತು.

ಹಿರಿಯ ನಾಗರಿಕ ಸಂಘದ ತಾಲೂಕಾ ಗೌರವಾಧ್ಯಕ್ಷ ಚನ್ನಪ್ಪ ಕೋಲಕಾರ, ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ, ಹಿರಿಯ ಮುಖಂಡ ಚಂಬಣ್ಣ ಬಾಳಿಕಾಯಿ ಮಾತನಾಡಿ, ಹಿರಿಯ ನಾಗರಿಕರನ್ನು ರಾಷ್ಟ್ರದ ಸಂಪತ್ತು ಎಂದು ಘೋಷಣೆ ಮಾಡಬೇಕು. ಆರ್ಥಿಕವಾಗಿ ದುರ್ಬಲರಾದ ಎಲ್ಲಾ ಹಿರಿಯ ನಾಗರಿಕರಿಗೆ ಮಾಸಿಕ 10 ಸಾವಿರ ರೂ ವೃದ್ಧಾಪ್ಯ ವೇತನ, ಸರ್ಕಾರಿ ಬಸ್ಸುಗಳಲ್ಲಿ ಹಿರಿಯ ನಾಗರಿಕರಿಗೆ ಉಚಿತ ಪ್ರಯಾಣ, ಆದಾಯ ಮಿತಿ ರೂ 33 ಸಾವಿರದಿಂದ 1.20 ಲಕ್ಷ (ಬಿಪಿಎಲ್ ಆದಾಯ ಮಿತಿ)ಕ್ಕೆ ಹೆಚ್ಚಿಸುವುದು, 7ನೇ ವೇತನ ಆಯೋಗದ ವರದಿಯ 2ನೇ ಭಾಗವನ್ನು ತಕ್ಷಣ ಬಿಡುಗಡೆ ಮಾಡಬೇಕು, ಜಿಲ್ಲೆಗೊಂದು ಹಿರಿಯರ ನಾಗರಿಕರ ಭವನ ನಿರ್ಮಾಣ ಹಾಗೂ ಪಟ್ಟಣದಲ್ಲಿ ಪಂಪ ವೃತ್ತದ ಹತ್ತಿರ ಇರುವ ಪುರಸಭೆಯ ಕಟ್ಟಡವನ್ನು ಹಿರಿಯ ನಾಗರಿಕರ ಕಾರ್ಯಾಲಯಕ್ಕೆ ಕೊಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದರು.

ಈ ವೇಳೆ ಕುಬೇರಪ್ಪ ಮಹಾಂತಶೆಟ್ಟರ, ಎಸ್.ಪಿ. ಪಾಟೀಲ, ಸಿ.ಎಸ್. ಕೋಟಿಮಠ, ಎಸ್.ಜಿ. ತಾಳಿಕೋಟಿಮಠ, ದ್ಯಾಮನಗೌಡ ಪಾಟೀಲ, ನೀಲಪ್ಪ ಕರ್ಜಕಣ್ಣವರ, ಚಂದ್ರಶೇಖರ ಹೂಗಾರ, ಶಕುಂತಲಾ ಅಳಗವಾಡಿ, ಈರಣ್ಣ ಮಡಿವಾಳರ, ಸುರೇಶ ರಾಚನಾಯ್ಕರ, ಗೂಳಪ್ಪ ಮೆಕ್ಕಿ, ಭರಮಪ್ಪ ಕೊಡ್ಲಿ, ಎನ್.ಎಂ. ವಡಕಣ್ಣವರ ಮುಂತಾದವರಿದ್ದರು.

# ಮುಖ್ಯೋಪಾಧ್ಯಾಯ ರಾಮಣ್ಣ ಹೊಸಕೇರಿ ಸೇವಾ ನಿವೃತ್ತಿ

■ವಿಜಯಸಾಕ್ಷಿ ಸುದ್ದಿ, ಡಂಬಳ
ಸದಾಕಾಲ ತಮ್ಮ ಪ್ರಾಮಾಣಿಕ ಕರ್ತವ್ಯದ ಮೂಲಕ ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿದ ರಾಮಣ್ಣ ಭರಮಪ್ಪ ಹೋಸಕೇರಿ ಮೇ 31ರಂದು ನಿವೃತ್ತಿ ಹೊಂದಿದರು.



1994ರಲ್ಲಿ ಸಿಂಗಟಾಲೂರಿನಲ್ಲಿ ಶಿಕ್ಷಕರಾಗಿ ವೃತ್ತಿ ಜೀವನ ಆರಂಭಿಸಿ, ಬಳಿಕ 1996ರಲ್ಲಿ ಪೇಠಾ ಆಲೂರನಲ್ಲಿ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ಸುದೀರ್ಘ 14 ವರ್ಷಗಳ ಕಾಲ ಸೇವೆ ಸಲ್ಲಿಸಿದರು. ಬಳಿಕ ಡಂಬಳ ಗ್ರಾಮದಲ್ಲಿ 2010ರಿಂದ ಸತತ 9 ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದರು. 2020ರಲ್ಲಿ ದಿಂಡೂರ ಗ್ರಾಮದಲ್ಲಿ 5 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದಾರೆ.

ಮುಖ್ಯೋಪಾಧ್ಯಾಯರಾಗಿ ಶಾಲೆಗಳ ಅಭಿವೃದ್ಧಿಯ ಜೊತೆಗೆ ಮಕ್ಕಳ ಭವಿಷ್ಯ ಕಟ್ಟಲು ಶ್ರಮಿಸಿದ ಶ್ರೇಯಸ್ಸು ಶಿಕ್ಷಕ ಆರ್.ಬಿ. ಹೊಸಕೇರಿ ಅವರದಾಗಿದೆ. ವಿದ್ಯಾರ್ಥಿಗಳ ಮೆಚ್ಚುಗೆಯ ಶಿಕ್ಷಕರಾಗಿ ಗ್ರಾಮೀಣ ಮಕ್ಕಳ ಆಶಾಕಿರಣವಾಗಿ, ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸಿ, ಹಲವು ಉನ್ನತ ಹುದ್ದೆಗಳನ್ನು ಹೊಂದುವಂತೆ ಮಾಡಿದ್ದಾರೆ.

ವಿದ್ಯಾರ್ಥಿಗಳು ಶಿಕ್ಷಕರ ಸೂಕ್ತ ಮಾರ್ಗದರ್ಶನ ಪಡೆದುಕೊಳ್ಳಿ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಭವಿಷ್ಯ ನಿರ್ಮಿಸಲು ಪ್ರತಿಯೊಬ್ಬ ಶಿಕ್ಷಕರು ಶ್ರಮಿಸಲು ಮುಂದಾಗಬೇಕು ಎನ್ನುತ್ತಾರೆ ನಿವೃತ್ತ ಶಿಕ್ಷಕ ರಾಮಣ್ಣ ಹೊಸಕೇರಿ. ವಿದ್ಯಾರ್ಥಿಗಳು, ಪಾಲಕರೊಂದಿಗೆ ಸದಾಕಾಲ ಬೆರೆತು ಕಲಿಯಲು ಬಂದ ವಿದ್ಯಾರ್ಥಿಗಳ ಪ್ರೀತಿಯ ಶಿಕ್ಷಕರಾಗಿ ನಿವೃತ್ತಿಯ ಅಂಚಿನವರೆಗೂ ಅನುಪಮ ಸೇವೆ ಸಲ್ಲಿಸಿದ ಇವರ ಬೋಧನಾ ಕೌಶಲ್ಯ ಅನುಪಮವಾದದ್ದು ಎಂದು ಸಮೂಹ ಸಂಪನ್ಮೂಲ ವ್ಯಕ್ತಿ ಎಸ್.ಎಮ್. ಪಾಟೀಲ ಮೆಚ್ಚುಗೆ ಸೂಚಿಸಿದರು.

# ಬೆಳೆಹಾನಿ ಸಮೀಕ್ಷೆ ನಡೆಸಲು ಅಧಿಕಾರಿಗಳಿಗೆ ಸೂಚನೆ

▶▶ಮೊದಲನೇ ಪುಟದಿಂದ
ಹದಲಿ, ಯಾವಗಲ್, ಸುರಕೋಡ ಗ್ರಾಮಗಳಿಗೆ ಭೇಟಿ ನೀಡಿ ಬೆಣ್ಣೆಹಳ್ಳದ ಪ್ರವಾಹದಿಂದ ಹಾನಿ ಪರಿಶೀಲನೆ ನಡೆಸಿದರು. ಕಳೆದ ಬಾರಿ ಬೆಣ್ಣೆಹಳ್ಳದ ಪ್ರವಾಹದಿಂದ ಬೆಳೆಹಾನಿಯಾಗಿದ್ದು, ರೈತರಿಗೆ ಸರ್ಕಾರ ಘೋಷಿಸಿದ್ದ ಮಧ್ಯಂತರ ಬೆಳೆ ಪರಿಹಾರ ಇನ್ನೂ ಬಾರದ ಕುರಿತು ರೈತರು ಅಳಲು ತೋಡಿ-ಕೊಂಡರು. ಕಳೆದ ಬಾರಿ ಮಧ್ಯಂತರ ಬೆಳೆ ಪರಿಹಾರ ಮತ್ತು ಪ್ರಸಕ್ತ ಸಾಲಿನ ಬೆಳೆಹಾನಿ ಕ್ಷೇತ್ರವನ್ನು ತುರ್ತು ಸಮೀಕ್ಷೆ ನಡೆಸಿ ಸರ್ಕಾರಕ್ಕೆ ವರದಿ ನೀಡುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪ ವಿಭಾಗಾಧಿಕಾರಿ ಗಂಗಪ್ಪ ಎಂ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಸಿದ್ದು ಪಾಟೀಲ, ರಾಜಗೌಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಮುಖ್ಯಾಂಶಗಳು

* ಬೆಣ್ಣೆಹಳ್ಳ ಪ್ರವಾಹದಿಂದ 2000 ಎಕರೆ ಕ್ಷೇತ್ರದ ಬೆಳೆ ಹಾನಿ.
* ತಕ್ಷಣ ಬೆಳೆಹಾನಿ ಸಮೀಕ್ಷೆ ನಡೆಸಲು ಅಧಿಕಾರಿಗಳಿಗೆ ಸೂಚನೆ.
* ಬೆಣ್ಣೆಹಳ್ಳ ಪ್ರವಾಹ ತಡೆಗೆ ಸರ್ಕಾರದ 200 ಕೋಟಿ ಯೋಜನೆ ಶೀಘ್ರ ಜಾರಿ.
* ಬೆಣ್ಣೆಹಳ್ಳದಲ್ಲಿ ಹರಿಯುವ 16 ಟಿಎಂಸಿ ನೀರು ಸಂಗ್ರಹ ಅಸಾಧ್ಯ.
* ಯಾವಗಲ್, ಮೆಣಸಗಿ ಸಂಪರ್ಕ ಸೇತುವೆ ಹೆಚ್ಚಿಸುವ ಭರವಸೆ.



ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ ಹಾಗೂ ಲಿಂ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಗದಗ ನಗರದ ಪ್ರಮುಖ ಬೀದಿಗಳಲ್ಲಿ ಉಭಯ ಗುರುಗಳ ಭಾವಚಿತ್ರದ ಮೆರವಣಿಗೆ ಜರುಗಿತು.


## ಐಎಂಎ ಮೆಡಿಕೊ-ಲೀಗಲ್ ರಾಜ್ಯ ಮಟ್ಟದ ಸಮ್ಮೇಳನದಲ್ಲಿ ಸಚಿವ ಎಚ್.ಕೆ. ಪಾಟೀಲ

# ಸೇವೆಯಲ್ಲಿ ಪ್ರಾಮಾಣಿಕತೆ ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ
ರೋಗಿಗಳನ್ನು ಉಳಿಸುವಾಗ ನಮ್ಮನ್ನು ನಾವು ಕಾನೂನಾತ್ಮಕ ರಕ್ಷಿಸಿಕೊಳ್ಳುವುದಕ್ಕೂ ಆದ್ಯತೆ ನೀಡಬೇಕು ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಸಭಾಂಗಣದಲ್ಲಿ ಐಎಂಎ ವತಿಯಿಂದ ರವಿವಾರ ಹಮ್ಮಿಕೊಂಡಿದ್ದ ಎರಡು ದಿನಗಳ ಮೆಡಿಕೋ-ಲೀಗಲ್ ವಾರ್ಷಿಕ ಕರ್ನಾಟಕ ರಾಜ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೈನಂದಿನ ಕರ್ತವ್ಯದಲ್ಲಿ ಕಾನೂನು ಪಾಲನೆ ನಮ್ಮೆಲ್ಲರಿಗೂ ಅನಿವಾರ್ಯ. ಕಾನೂನು ಪಾಲನೆಯೊಂದಿಗೆ ಕರ್ತವ್ಯದಲ್ಲಿ ಗುಣಮಟ್ಟ ಕಾಯ್ದುಕೊಳ್ಳುವ ಮೂಲಕ ನೈತಿಕತೆ ಮತ್ತು ಪ್ರಾಮಾಣಿಕತೆಯಿಂದ ದೈನಂದಿನ ಕೆಲಸ ನಿರ್ವಹಿಸಬೇಕು. ಸರ್ಕಾರ ನಿಗದಿಪಡಿಸಿದ ಮಾರ್ಗಸೂಚಿಗಳನ್ವಯ ಜನರ ಆರೋಗ್ಯ ಜೀವನ ಮಟ್ಟ




ಸುಧಾರಣೆಗೆ ವೈದ್ಯರು ಸೇವೆ ನಿರ್ವಹಿಸಬೇಕು. ಸೇವೆಯಲ್ಲಿ ಪ್ರಾಮಾಣಿಕತೆ ಅಳವಡಿಸಿಕೊಳ್ಳಬೇಕು. ನಾಗರಿಕ ಸಮಾಜ ವೈದ್ಯರನ್ನು ಗಮನಿಸುತ್ತಿರುತ್ತದೆ. ಕಾನೂನು ವ್ಯಾಪ್ತಿಯಲ್ಲೇ ಕಾಯಕ ನಿಷ್ಠರಾಗಬೇಕು. ಹಿರಿಯ ವೈದ್ಯರ ಸೇವೆಯನ್ನು ಕಿರಿಯ ವೈದ್ಯರು ಅನುಕರಿಸಬೇಕು. ಸಾಮಾಜಿಕ ವ್ಯವಸ್ಥೆಯಲ್ಲಿ ವೈದ್ಯರು ಚಿಕಿತ್ಸೆ ವಿಳಂಬ ಮಾಡಬಾರದು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

> ಆರೋಗ್ಯಯುತ ಸಮಾಜ ನಿರ್ಮಾಣದಲ್ಲಿ ವೈದ್ಯರ ಪಾತ್ರ ಮುಖ್ಯವಾಗಿದೆ. ಸಾಮಾಜಿಕ ಹೊಣೆಗಾರಿಕೆಯು ವೈದ್ಯರ ಕರ್ತವ್ಯದಲ್ಲೇ ಅಡಗಿರುತ್ತದೆ. ಕರ್ತವ್ಯದಲ್ಲಿ ವೈದ್ಯರು ಜೀವನ ಅಡವಿಟ್ಟು ಸೇವೆ ಮಾಡುತ್ತಾರೆ. ಪ್ರಕೃತಿ ವಿಕೋಪ, ಯುದ್ಧದ ಸಂದರ್ಭದಲ್ಲಿ, ಆಂತರಿಕ ಸಂಘರ್ಷದ ಸಂದರ್ಭದಲ್ಲಿ ವೈದ್ಯರ ಸೇವೆ ಪ್ರಮುಖವಾಗಿರುತ್ತದೆ. ಅಂತಹ ಸಂದರ್ಭದಲ್ಲಿ ವೈದ್ಯರಿಗೆ ಕಾನೂನು ತೊಡಕು ಎದುರಾಗುತ್ತವೆ. ಕಾನೂನು ತೊಡಕುಗಳಿಂದ ಜೀವ ರಕ್ಷಣೆ ಮಾಡಿಕೊಂಡು ಸೇವೆಯಲ್ಲಿ ತೊಡಗಿಸುವುದು ಹೇಗೆ ಎಂಬುದನ್ನು ಈ ಸಮ್ಮೇಳನದಿಂದ ಕಲಿಯಬಹುದಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಐಎಂಎ ರಾಷ್ಟ್ರೀಯ ಉಪಾಧ್ಯಕ್ಷ ಡಾ. ಜಿ.ಬಿ. ಬಿಡನಾಳ ಮಾತನಾಡಿ, ವೈದ್ಯರು ದೈನಂದಿನ ಸೇವೆಯಲ್ಲಿ ಕಾನೂನು ತೊಡಕುಗಳ ಬಗ್ಗೆ ಅರಿವು ಹೊಂದುವ ಅನಿವಾರ್ಯತೆ ಇದೆ. ನಿರ್ಲಕ್ಷ್ಯ ವಹಿಸಿದರೆ ತೊಂದ-ರೆಗೆ ಒಳಗಾಗುತ್ತೇವೆ ಎಂಬುದನ್ನು ಮರೆಯಬಾರದು ಎಂದರು.

ಡಾ. ವಿ.ಡಿ. ಚಿನಿವಾಲ ಮಾತನಾಡಿ, ಪ್ರಥಮ ಬಾರಿಗೆ ರಾಜ್ಯದಲ್ಲಿ ಮೆಡಿಕೊ ಸಮ್ಮೇಳನ ನಡೆಸಿದ ಕೀರ್ತಿ ಗದಗ ಜಿಲ್ಲೆಗೆ ಸಲ್ಲುತ್ತದೆ. ಜಿಲ್ಲೆಯು ಸಹಕಾರಿ ಕ್ಷೇತ್ರದ ಜತೆಗೆ ವಾಣಿಜ್ಯ ಕ್ಷೇತ್ರದಲ್ಲೂ ಅಭಿವೃದ್ಧಿ ಆಗುತ್ತಿದೆ. ಅಂತೆಯೇ ವೈದ್ಯಕೀಯ ಕ್ಷೇತ್ರದಲ್ಲಿ ಅಭಿವೃದ್ಧಿ ಹೊಂದುತ್ತಿರುವುದು ಸಂತಸ ತಂದಿದೆ ಎಂದರು. ಐಎಂಎ ರಾಷ್ಟ್ರೀಯ ಅಧ್ಯಕ್ಷ ದಿಲೀಪ ಬನ್ಸಾಲಿ, ಡಾ. ಯೋಗಾನಂದ ರೆಡ್ಡಿ, ಡಾ. ಬಸವರಾಜ ಬೊಮ್ಮನಹಳ್ಳಿ, ಡಾ. ವೀರಭದ್ರಪ್ಪ, ಡಾ. ವಿ.ಎ. ಮಾಲೂರು, ಡಾ. ರಾಜಶೇಖರ ಬಳ್ಳಾರಿ, ಡಾ. ಅನ್ನದಾನಿ ಮೇಟಿ, ಡಾ. ವೆಂಕಟಾಚಲಪತಿ, ಡಾ. ಹೊನ್ನೆಗೌಡ. ಡಾ. ತುಕಾರಾಂ ಸೂರಿ, ಡಾ. ಅರವಿಂದ, ಡಾ. ರಾಧಿಕಾ ಕುಲಕರ್ಣಿ ಇತರರು ಇದ್ದರು.

# ಚು.ಸಾ.ಪ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕಾ ಚುಟುಕು ಸಾಹಿತ್ಯ ಪರಿಷತ್‌ನ ನೂತನ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮವು ರಾಜ್ಯ ಮತ್ತು ಜಿಲ್ಲಾ ಘಟಕಗಳ ಆದೇಶದ ಅನ್ವಯ ರವಿವಾರ ತಾಲೂಕಾ ಸಾಹಿತ್ಯ ಭವನದಲ್ಲಿ ಜರುಗಿತು.

ತಾಲೂಕಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಶಿಕ್ಷಕಿ ವಿರೂಪಮ್ಮ ಹಿರೇಮಠ, ಉಪಾಧ್ಯಕ್ಷರಾಗಿ ಪತ್ರಕರ್ತ ಸೋಮು ಲದ್ದಿಮಠ, ಬಿ.ಎಸ್. ರಡ್ಡೇರ, ವೀರಯ್ಯ ನೆಲ್ಲೂರಮಠ, ಪ್ರಧಾನ ಕಾರ್ಯದರ್ಶಿಗಳಾಗಿ ಬಿ.ಬಿ. ಮೇಗಲಮನಿ, ಸಹ ಕಾರ್ಯದರ್ಶಿಯಾಗಿ ಪತ್ರಕರ್ತ ಮೆಹಬೂಬ ಮೋತೆಖಾನ್, ಸಂಘಟನಾ ಕಾರ್ಯದರ್ಶಿಯಾಗಿ ಯಲ್ಲಪ್ಪ ಕೊಪ್ಪದ, ಕಾರ್ಯದರ್ಶಿಯಾಗಿ ಶಿಂಧು ದೊಡ್ಡಮನಿ, ಸದಸ್ಯರಾಗಿ ಶರಣಪ್ಪ ಹೆಬ್ಬಳ್ಳಿ, ಮಹೇಶ ಗೌಡರ, ಎಂ.ಎಚ್. ಮಡಿವಾಳರ, ಎಚ್.ಸಿ. ರಂಗನಗೌಡ್ರ, ಬಿ.ಜಿ. ಕೊವಳ್ಳಿ, ಬಿ.ಐ. ಪಿಡ್ಡನಗೌಡ್ರ, ಎನ್.ವಿ. ನೀರಲೊಟಿ ಅವರನ್ನು ಆಯ್ಕೆ ಮಾಡಲಾಯಿತು.

ತಾಲೂಕಾ ಶಿಕ್ಷಕರ ಸಂಘದ ಅಧ್ಯಕ್ಷ ವಾಯ್.ಡಿ. ಗಾಣಿಗೇರ ಹಾಗೂ ತಾಲೂಕಾ ನೌಕರರ ಸಂಘದ ಅಧ್ಯಕ್ಷ ಎಸ್.ಜಿ. ದಾನಪ್ಪಗೌಡ್ರರನ್ನು ಪೋಷಕರಾಗಿ ಸರ್ವಾನುಮತದಿಂದ ಘೋಷಿಸಲಾಯಿತು.

## ವಿಶ್ವ ರಕ್ತದಾನಿಗಳ ಜಾಥಾ ಕಾರ್ಯಕ್ರಮದಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ

# ರಕ್ತದಾನಕ್ಕೆ ಯಾವುದೂ ಸಾಟಿಯಲ್ಲ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಶ್ರೀ ಜಗದ್ಗುರು ತೋಂಟದಾರ್ಯ ಸರಕಾರಿ ಪ್ರಥಮದರ್ಜೆ ಕಾಲೇಜು ಮುಂಡರಗಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ರಕ್ತದಾನಿಗಳ ದಿನದ ನಿಮಿತ್ತ ಜಾಥಾ ಕಾರ್ಯಕ್ರಮ ಜರುಗಿತು.

ಜಾಥಾಗೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕೆ, ರಕ್ತದಾನ ಶ್ರೇಷ್ಠದಾನ, ರಕ್ತದಾನ ಜೀವದಾನ, ರಕ್ತದಾನ ಮಹಾದಾನ ಎನ್ನುವಂತೆ ಎಲ್ಲರೂ ಮೂರು ತಿಂಗಳಿಗೆ ಒಂದು ಸಾರಿ ರಕ್ತದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಯಾಗಿ ದೇಹದಲ್ಲಿ ಚೈತನ್ಯ ಬರುವುದು. ಹಾಗಾಗಿ ಎಲ್ಲರೂ ರಕ್ತದಾನ ಮಾಡಿ ರಕ್ತದ ಕೊರತೆಯನ್ನು ನೀಗಿಸುವಲ್ಲಿ ಕೈಜೋಡಿಸಬೇಕು. ರಕ್ತದಾನದಂತೆ ಅಂಗಾಂಗದಾನವೂ ಮಹತ್ವದ್ದಾಗಿದ್ದು, ದಾನಿಗಳ ಸ್ಮರಣೆ ಮಾಡುವುದು ಸ್ತುತ್ಯಾರ್ಹವಾಗಿದೆ ಎಂದರು.



ಮಹಾವಿದ್ಯಾಲಯದ ಪ್ರೊ. ಉಮಾ ಕೋಳಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ರಕ್ತದಾನಕ್ಕೆ ಸಾಟಿ ಯಾವುದೂ ಇಲ್ಲ. ಎಲ್ಲ ಆರೋಗ್ಯವಂತರು ಹಾಗೂ ಯುವಕರು ಗರ್ಭಿಣಿ ಮಹಿಳೆಯರಿಗೆ, ರಕ್ತಹೀನತೆ ಇರುವವರಿಗೆ ರಕ್ತದಾನ ಮಾಡುವುದರ ಮೂಲಕ ಮಾದರಿಯಾಗಬೇಕು. ಹಿಂದಿನ ಕಾಲದಲ್ಲಿ ಅನ್ನದಾನ, ನೇತ್ರದಾನ, ಗೋದಾನ, ಭೂದಾನ ಶ್ರೇಷ್ಠವಾಗಿದ್ದವು. ಅವೆಲ್ಲಕ್ಕಿಂತ ರಕ್ತದಾನ ಇಂದಿನ ಶ್ರೇಷ್ಠ ದಾನವಾಗಿದೆ. ರಕ್ತದಾನದಿಂದ ದಾನಿಯ ದೇಹದಲ್ಲಿ 24 ಗಂಟೆಯೊಳಗಾಗಿ ಹೊಸ ರಕ್ತದ ಉತ್ಪತ್ತಿ ಪ್ರಾರಂಭವಾಗುತ್ತದೆ ಎಂದು ತಿಳಿಸಿದರು.

ಜಾಥಾ ಕಾರ್ಯಕ್ರಮವು ಜಗದ್ಗುರು ತೋಂಟದಾರ್ಯ ಸರಕಾರಿ ಪ್ರಥಮದರ್ಜೆ ಕಾಲೇಜಿನಿಂದ ಪ್ರಾರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಹುಡ್ಕೋ ಕಾಲನಿಯಲ್ಲಿ ರಕ್ತದಾನ ಕುರಿತು ಜಾಗೃತಿ ಮೂಡಿಸಲಾಯಿತು. ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಮಂಜುಳಾ ಸಜ್ಜನರ ಸ್ವಾಗತಿಸಿದರು. ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಬಸವರಾಜ ಲಾಳಗಟ್ಟಿ ವಂದಿಸಿದರು. ಜಾಥಾ ಕಾರ್ಯಕ್ರಮದಲ್ಲಿ ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ. ಲಕ್ಷ್ಮಣ ಪೂಜಾರ, ಜಿಲ್ಲಾ ಐಸಿಟಿಸಿ ಮೇಲ್ವಿಚಾರಕರಾದ ಬಸವರಾಜ ಲಾಳಗಟ್ಟಿ, ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಮಂಜುಳಾ ಸಜ್ಜನರ, ಕಾಲೇಜಿನ ಎನ್.ಎಸ್.ಎಸ್ ಅಧಿಕಾರಿಗಳಾದ ಪ್ರೊ. ಕಾವೇರಿ ಭೋಲಾ ಮತ್ತು ಪ್ರೊ. ತಿಮ್ಮನಾಯಕ ಸೇರಿದಂತೆ ಪ್ರಾಧ್ಯಾಪಕ ವೃಂದದವರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

# 50 ಸಾವಿರ ಮಿರ್ಚಿ ಭಜಿ ಪ್ರಸಾದ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೀರೇಶ್ವರ ಪುಣ್ಯಾಶ್ರಮದ ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಪುಣ್ಯಸ್ಮರಣೋತ್ಸವ ಹಾಗೂ ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯ ಸ್ಮರಣೋತ್ಸವ ಹಾಗೂ ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ಅಂಗವಾಗಿ ಮಹಾ ಪ್ರಸಾದದಲ್ಲಿ ನಗರದ ವೀರನಾರಾಯಣ ಬಡಾವಣೆಯ ಶ್ರೀ ಡಾ. ಪಂಡಿತ್ ಪುಟ್ಟರಾಜ ಸಮಾಜ ಸೇವಾ ಟ್ರಸ್ಟ್ ವತಿಯಿಂದ 50 ಸಾವಿರ ಮಿರ್ಚಿ ಭಜಿ ಪ್ರಸಾದ ವಿತರಣೆ ಮಾಡಿದರು.



ಟ್ರಸ್ಟ್‌ನ ಅಧ್ಯಕ್ಷ ಶಿದ್ರಾಮಯ್ಯ ಕಟಗಿಹಳ್ಳಿಮಠ ಈ ಸಂದರ್ಭದಲ್ಲಿ ಮಾತನಾಡಿ, ಪ್ರತೀ ವರ್ಷದಂತೆ ನಮ್ಮ ಟ್ರಸ್ಟ್ ವತಿಯಿಂದ ಮಿರ್ಚಿ ಭಜಿ ಸೇವೆ ಮಾಡಲಾಗಿದೆ. ಇದಕ್ಕೆ ಶ್ರೀ ಡಾ. ಪಂ. ಪುಟ್ಟರಾಜ ಗವಾಯಿಗಳು ಪ್ರೇರಣೆಯಾಗಿದ್ದಾರೆ. ಅವರ ದೇವಸ್ಥಾನವನ್ನು ನಮ್ಮ ಬಡಾವಣೆಯಲ್ಲಿ ನಿರ್ಮಾಣ ಮಾಡಿ ದಿನನಿತ್ಯ ಅವರಿಗೆ ಪೂಜೆ ಸಲ್ಲಿಸಲಾಗುತ್ತದೆ ಎಂದರು.

ವೀರೇಶ್ವರ ಪುಣ್ಯಾಶ್ರಮದ ಶ್ರೀ ಕಲ್ಲಯ್ಯಜ್ಜನವರು ಮಹಾಪ್ರಸಾದ ವಿತರಣೆಗೆ ಚಾಲನೆ ನೀಡಿ ಮಾತನಾಡಿ, ಅನ್ನದಾನ ಎಲ್ಲಾ ದಾನಕ್ಕಿಂತಲೂ ಶ್ರೇಷ್ಠವಾದದ್ದು. ಈ ಪ್ರಸಾದ ಸೇವೆ ಮಾಡುತ್ತಿರುವ ನಿಮಗೆಲ್ಲ ಪುಟ್ಟರಾಜ, ಪಂಚಾಕ್ಷರಿ ಗವಾಯಿಗಳ ಆಶೀರ್ವಾದ ಸದಾ ಇರಲಿ ಎಂದರು.

ಪ್ರಸಾದ ಸೇವೆಯ ಸಂದರ್ಭದಲ್ಲಿ ಟ್ರಸ್ಟ್‌ನ ಉಪಾಧ್ಯಕ್ಷರಾದ ಬಸನಗೌಡ ಪಾಟೀಲ, ಕಾರ್ಯದರ್ಶಿ ಗಂಗಾಧರ ಬೆನಕಲ್, ಸದಸ್ಯರಾದ ಈಶಪ್ಪ ಅಂಗಡಿ, ಮಾಂತೇಶ ಲಗಳಿ, ಬಸವರಾಜ್ ದಾವಣಗೆರೆ, ಭೀಮಪ್ಪ ಮೊಕಾಶಿ, ಶರಣಪ್ಪ ಮೇಟಿ, ಸಂಘದ ಪದಾಧಿಕಾರಿಗಳಾದ ಶಿವಯ್ಯ ಬೆಳ್ಳಿರಿಮಠ, ಸುನೀಲ ಚಿನ್ನಾಪುರ, ಶಿವಪ್ಪ ಲಗಳಿ ಮಲ್ಲಿಕಾರ್ಜುನ ಕಿರೇಸೂರ, ರಾಜಶೇಖರ ಶೆಟ್ಟಣ್ಣವರ, ಪುಟ್ಟು ಕೊರ್ಲಳ್ಳಿ, ಮಂಜು ಕ್ಯಾಡದ, ಕೊಟ್ಟೂರು ಬಸಪ್ಪ, ಈರಣ್ಣ ಕಾತರಕಿ, ಗ್ಯಾನಪ್ಪ ಹಾಳಕೇರಿ, ದರ್ಶನ್ ಮುಂತಾದವರು ಉಪಸ್ಥಿತರಿದ್ದರು. ಸಾವಿರಾರು ಭಕ್ತರು, ಕಲಾವಿದರು, ಗುರು ಬಂಧುಗಳು ಪ್ರಸಾದ ಸೇವಿಸಿ ಪುನೀತರಾದರು.

# ಚುಟುಕು ಸಾಹಿತ್ಯದಲ್ಲಿ ಅಪ್ರತಿಮ ಶಕ್ತಿಯಿದೆ



■ವಿಜಯಸಾಕ್ಷಿ ಸುದ್ದಿ, ರೋಣ

ಚುಟುಕು ಸಾಹಿತ್ಯದಿಂದಲೂ ಸಮಾಜದಲ್ಲಿ ಆಮೂಲಾಗ್ರ ಬದಲಾವಣೆ ತರಲು ಸಾಧ್ಯ ಎಂದು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಮಹಾ ಪ್ರಧಾನ ಕಾರ್ಯದರ್ಶಿ ವ್ಹಿ.ಬಿ. ಸೋಮನಕಟ್ಟಿಮಠ ಹೇಳಿದರು.

ಅವರು ರವಿವಾರ ಪಟ್ಟಣದ ಕನ್ನಡ ಸಾಹಿತ್ಯ ಭವನದಲ್ಲಿ ಜರುಗಿದ ರೋಣ ತಾಲೂಕಾ ಚುಟುಕು ಸಾಹಿತ್ಯ ಪರಿಷತ್ ಉದ್ಘಾಟನೆ ಹಾಗೂ ಸಂಘಟನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಮ್ಮ ನಾಡು-ನುಡಿ, ಸಂಸ್ಕೃತಿಗಳ ಉಳಿವಿಗಾಗಿ ಸಾಹಿತ್ಯ ಕ್ಷೇತ್ರ ಅನೇಕ ಮಹತ್ವದ ಕೊಡುಗೆಗಳನ್ನು ನೀಡಿದೆ. ಅದರಲ್ಲಿ ಚುಟುಕು ಸಾಹಿತ್ಯ ಕೂಡ ಒಂದು. ನಾಲ್ಕು ಸಾಲುಗಳ ಚುಟುಕು ಸಾಹಿತ್ಯ ಮನುಷ್ಯನ ಮನಸ್ಸಿಗೆ ನಾಟುವ ಜೊತೆಗೆ ಅವನಲ್ಲಿ ಬದಲವಾಣೆ ತರುವ ಶಕ್ತಿಯನ್ನು ಹೊಂದಿದೆ. ಅಪ್ರತಿಮ ಶಕ್ತಿಯನ್ನು ಹೊಂದಿರುವ ಚುಟುಕು ಸಾಹಿತ್ಯವನ್ನು ಉಳಿಸಿ-ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ತಾಲೂಕಾ ನೌಕರರ ಸಂಘದ ಅಧ್ಯಕ್ಷ ಎಸ್.ಜಿ. ದಾನಪ್ಪಗೌಡರ ಮಾತನಾಡಿ, ಸಾಹಿತ್ಯ, ಜಾನಪದ ಸಾಹಿತ್ಯ, ಚುಟುಕು ಸಾಹಿತ್ಯ, ಮಕ್ಕಳ ಸಾಹಿತ್ಯ ಇವುಗಳು ನಮ್ಮ ನಾಡಿನ ಹಿರಿಮೆಯನ್ನು ಎತ್ತಿಹಿಡಿದ ಗ್ರಂಥಗಳು. ಸಾಹಿತ್ಯದಿಂದ ಮಾತ್ರ ನಮ್ಮ ಪ್ರಾಚೀನ ಕಾಲದ ಆಗು-ಹೋಗುಗಳನ್ನು ತಿಳಿಯಬಲ್ಲೆವು ಎಂಬ ಸತ್ಯದ ಅರಿವು ನಮ್ಮಲ್ಲಿ ಬಂದಾಗ ಮಾತ್ರ ಇತಿಹಾಸವನ್ನು ಅರ್ಥ ಮಾಡಿಕೊಳ್ಳಲು ಸಾಧ್ಯ ಎಂದರು. ಶಿಕ್ಷಕರ ಸಂಘದ ಅಧ್ಯಕ್ಷ ವಾಯ್.ಡಿ. ಗಾಣಿಗೇರ, ಗಜೇಂದ್ರಗಡ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷೆ ರೇಣುಕಾ ಎವೂರ, ಸಾಹಿತಿ ಎಸ್.ಬಿ. ಹಿರೇಮಠ, ರೋಣ ತಾಲೂಕಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷೆ ವಿರೂಪಮ್ಮ ಹಿರೇಮಠ, ಕೃಷಿಕ ಸಮಾಜದ ನಿರ್ದೇಶಕ ಸಂಜಯ ದೊಡ್ಡಮನಿ ಮುಂತಾದವರು ಉಪಸ್ಥಿತರಿದ್ದರು. ಶಿಕ್ಷಕ ವಾಲ್ಮೀಕಿ ನಿರೂಪಿಸಿ ವಂದಿಸಿದರು.

# ಮೃತ ಮಾಜಿ ಸೈನಿಕನಿಗೆ ಗೌರವ ನಮನ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಹರ್ಲಾಪೂರ ಗ್ರಾಮದ ಹೆಮ್ಮೆಯ ಸುಪುತ್ರ, ಮಾಜಿ ವೀರಯೋಧ ಹಾಗೂ ಗದಗ ಪಿಐಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಮಾರುತಿರಡ್ಡಿ ಕೊಣ್ಣೂರ ಅವರು ತಮ್ಮ 61ನೇ ವಯಸ್ಸಿನಲ್ಲಿ ಶನಿವಾರ ಮಧ್ಯಾಹ್ನ ನಿಧನರಾದರು.



ಅವರು ಬಿಎಸ್‌ಎಫ್‌ನಲ್ಲಿ ಸುದೀರ್ಘ 35 ವರ್ಷಗಳ ಕಾಲ ಸೇವೆಯನ್ನು ಸಲ್ಲಿಸಿದ್ದಾರೆ. ಗದಗ ಜಿಲ್ಲಾ ಮಾಜಿ ಸೈನಿಕರ ಸಂಘ ಹಾಗೂ ಬೆಳಗಾವಿ ಜಿಲ್ಲಾ ಮುಂಡರಗಿ ಡಂಬಳ ಮಾಜಿ ಸೈನಿಕರ ಸಂಘದ ಸಹಯೋಗದಲ್ಲಿ ಮಾರುತಿರಡ್ಡಿ ಕೊಣ್ಣೂರ ಅವರ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸುವುದರ ಮೂಲಕ ರಾಷ್ಟ್ರಧ್ವಜದೊಂದಿಗೆ ಗೌರವ ಸಮರ್ಪಿಸಲಾಯಿತು. ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಬಸವಲಿಂಗಪ್ಪ ಮುಂಡರಗಿ ಹಾಗೂ ಬೆಳಗಾವಿ ಜಿಲ್ಲಾ ಅಧ್ಯಕ್ಷರು, ಸೈನಿಕರು ಗೌರವ ವಂದನೆ ಸಲ್ಲಿಸಿ ಮೃತರ ಪತ್ನಿ ನೇತ್ರಾವತಿ ಕೊಣ್ಣೂರರಿಗೆ ರಾಷ್ಟ್ರಧ್ವಜವನ್ನು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಮಾಜಿ ಸೈನಿಕರಾದ ವೀರಪ್ಪ ಬಿಂಗಿ, ವಿಜಯಕುಮಾರ ಬಡಿಗೇರ, ಬಾಲಪ್ಪ ಲಕ್ಕುಂಡಿ, ತಿಪ್ಪರಡ್ಡಿ ಕೊಣ್ಣೂರ, ಶಿವಾನಂದ ಯಾಳವಾಡ, ಶರಣಪ್ಪಗೌಡ ಪಾಟೀಲ್, ಶಿವಾನಂದ ಕೊಣ್ಣೂರ, ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ಹುರುಳಿ, ಗದಗ ಜಿಲ್ಲಾ ರೈತ ಸಂಘದ ಅಧ್ಯಕ್ಷ ಯಲ್ಲಪ್ಪ ಬಾಬರಿ, ವೆಂಕರಡ್ಡಿ ಚುಕುಂಕಲ್ಲ, ವಜ್ರಸಾಬ್ ತಳಕಲ್, ಶರಣಪ್ಪ ಜೋಗಿನ, ಮಲ್ಲಿಕಾರ್ಜುನ್ ಇದ್ಲಿ ಮುಂತಾದವರಿದ್ದರು.

# ಉಭಯ ಗುರುಗಳ ಮಹಾ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಸೋಮವಾರ ಸಂಜೆ ಮಹಾರಥೋತ್ಸವ ಭಕ್ತಿಯಿಂದ ಜರುಗಿತು.

ಭವ್ಯ ಅಲಂಕಾರದಿಂದ ಕಂಗೊಳಿಸುತ್ತ ಮಹಾರಥವು ಮುಂದೆ ಸಾಗುತ್ತಿದ್ದಂತೆ ಭಕ್ತರು ಉಭಯ ಗುರುಗಳ ನಾಮಸ್ಮರಣೆ ಮಾಡುತ್ತ ಜಯಘೋಷ ಕೂಗಿದರು.

ಈ ಸಂದರ್ಭದಲ್ಲಿ ಹುಬ್ಬಳ್ಳಿಯ ಮೂರುಸಾವಿರ ಮಠದ ಪೂಜ್ಯಶ್ರೀ ಜ. ಗುರುಸಿದ್ಧ ರಾಜಯೋಗೇಂದ್ರ ಮಹಾಸ್ವಾಮಿಗಳು, ಧಾರವಾಡ ಮುರಘಾಮಠದ ಪೂಜ್ಯಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಗಂಗಾವತಿ ಕಲ್ಮಠದ ಪೂಜ್ಯಶ್ರೀ ಡಾ. ಕೊಟ್ಟೂರ ಮಹಾಸ್ವಾಮಿಗಳು, ಉಪ್ಪಿನ ಬೆಟಗೇ-ರಿಯ ಮೂರುಸಾವಿರಮಠದ ಪೂಜ್ಯಶ್ರೀ ಕುಮಾರ ವಿರೂಪಾಕ್ಷ ಮಹಾಸ್ವಾಮಿಗಳು, ಬಳಗಾನೂರ ಶ್ರೀಮಠದ ಪೂಜ್ಯಶ್ರೀ ಶಿವಶಾಂತವೀರ ಶರಣರು, ಚನ್ನಮ್ಮ ಕಿತ್ತೂರಿನ ಪೂಜ್ಯಶ್ರೀ ಪಂಚಾಕ್ಷರ ಮಹಾಸ್ವಾಮಿಗಳು, ಮುದ್ದೇಬಿಹಾಳದ ಪೂಜ್ಯಶ್ರೀ ಡಾ. ಲಾಲಲಿಂಗೇಶ್ವರ ಶರಣರು, ಅಫಜಲಪೂರಿನ ಪೂಜ್ಯಶ್ರೀ ವಿರುಪಾಕ್ಷಿ ದೇವರು, ಯಡ್ರಾಮಿಯ ಪೂಜ್ಯಶ್ರೀ ಪ್ರಣವಲಿಂಗ ಮಹಾಸ್ವಾಮಿಗಳು, ಲಿಂಗಸೂರಿನ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತ ಸಮೂಹ ಮಹಾರಥೋತ್ಸವದ ಅದ್ದೂರಿ ಕ್ಷಣಗಳನ್ನು ಕಣ್ತುಂಬಿಕೊಂಡರು.

## ಉಭಯ ಶ್ರೀಗಳ ಜಾತ್ರಾ ಮಹೋತ್ಸವದ ಶಿವಾನುಭವ ಗೋಷ್ಠಿಯಲ್ಲಿ ಡಾ. ಎಚ್.ಕೆ. ಪಾಟೀಲ

# ಪುಣ್ಯಾಶ್ರಮ ಮಾನವ ಹಕ್ಕುಗಳ ರಕ್ಷಣೆ ಮಾಡುತ್ತಿದೆ




■ವಿಜಯಸಾಕ್ಷಿ ಸುದ್ದಿ, ಗದಗ

ಜಗತ್ತಿನಲ್ಲಿ ಮಾನವ ಹಕ್ಕುಗಳ ಬಗ್ಗೆ ನಿಜವಾಗಿ ಅರ್ಥೈಸಿಕೊಂಡು ಅದನ್ನು ಜಾರಿಗೆ ತಂದ ಯಾವದಾದರೂ ಸಂಸ್ಥೆಯಿದ್ದರೆ ಅದು ಗದುಗಿನ ವೀರೇಶ್ವರ ಪುಣ್ಯಾಶ್ರಮ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 81ನೇ ಹಾಗೂ ಪದ್ಮಭೂಷಣ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಶಿವಾನುಭವ ಗೋಷ್ಠಿ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ವಿಕಲಚೇತನರನ್ನು ರಕ್ಷಿಸಿ ಅವರಿಗೆ ಅನ್ನ, ಶಿಕ್ಷಣ ನೀಡಿ ಸ್ವಾವಲಂಬಿಯಾಗಿಸುವ ಮೂಲಕ ದೇಶದ ಆಸ್ತಿಯನ್ನಾಗಿ ಮಾಡಿರುವುದು ಉಭಯ ಶ್ರೀಗಳ ಮಹಾನ್ ಕೆಲಸವಾಗಿದೆ. ನಾವುಗಳು ಬಸವಣ್ಣನವರ ಧಾರ್ಮಿಕ ಸಂದೇಶಗಳಿಗೆ ಮಾತ್ರ ಹೆಚ್ಚು ಒತ್ತು ಕೊಟ್ಟಿರುವದರಿಂದ ಅವರನ್ನು ರಾಜ್ಯಕ್ಕೆ ಮಾತ್ರ ಸೀಮಿತ ಮಾಡಲಾಗಿರುವದು ವಿಷಾದನೀಯ. ಬಸವಣ್ಣವರ ಆಲೋಚನೆಗಳು, ಸಂದೇಶಗಳು, ನೈಜ ವ್ಯಕ್ತಿತ್ವವನ್ನು ವಿಶ್ವಮಟ್ಟಕ್ಕೆ ಪರಿಚಯಿಸಬೇಕಿದೆ ಎಂದು ಹೇಳಿದ ಅವರು, ಪಂ. ಪುಟ್ಟರಾಜ ಗವಾಯಿಗಳವರ ಸ್ಮಾರಕ ಭವನ ಪೂರ್ಣಗೊಳ್ಳಬೇಕು. ಇದಕ್ಕೆ ಎಲ್ಲ ಗುರುಗಳ ಆಶೀರ್ವಾದ ಬೇಕಾಗಿದೆ. ಮುಂದಿನ ವರ್ಷ ಜಾತ್ರಾ ಮಹೋತ್ಸವದ ಕಾರ್ಯಕ್ರಮಗಳು ಸ್ಮಾರಕ ಭವನದಲ್ಲಿ ಜರುಗುತ್ತವೆ ಎಂದು ಹೇಳಿದರು.

ಗದುಗಿನ ತೋಂಟದಾರ್ಯ ಶ್ರೀ ಮಠದ ಡಾ. ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿ, ಉಭಯ ಶ್ರೀಗಳು ಲೋಕ ಕಂಡ ಅದ್ಭುತ ಮಹಾಪುರುಷರು. ಪ್ರಯತ್ನ ಮಾಡಿದ ಪ್ರತಿಯೊಬ್ಬರೂ ಸಾಧನೆ ಮಾಡಲು ಸಾಧ್ಯವಾಗುವದಿಲ್ಲ. ಸಾಧನೆ ಮಾಡಿದ ಅತ್ಯಂತ ವಿರಳ ವ್ಯಕ್ತಿಗಳಲ್ಲಿ ಉಭಯ ಶ್ರೀಗಳು ಮುಂಚೂಣಿಯಲ್ಲಿದ್ದಾರೆ. ಯಾವ ಮಕ್ಕಳು ತಂದೆ-ತಾಯಿ ಹಾಗೂ ಸಮಾಜಕ್ಕೆ ಹೊರೆಯಾಗಬೇಕಾಗಿರುತ್ತಾರೆ ಅಂತಹ ಮಕ್ಕಳಿಗೆ ಸ್ವಾವಲಂಬಿ ಬದುಕನ್ನು ನೀಡಿ ಪವಾಡ ಪುರುಷರೆನಿಸಿಕೊಂಡವರು ಉಭಯ ಶ್ರೀಗಳು ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಹೂವಿನಶಿಗ್ಲಿ ವಿರಕ್ತಮಠದ ಪೂಜ್ಯಶ್ರೀ ಚನ್ನವೀರ ಮಹಾಸ್ವಾಮಿಗಳು, ಧಾರವಾಡ ಮುರುಘಾಮಠದ ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಅಷ್ಟಗಿ ನಿಜಲಿಂಗ ಶಿವಾಚಾರ್ಯರು, ಬೊಮ್ಮನಹಳ್ಳಿ ವಿರಕ್ತಮಠದ ಪೂಜ್ಯಶ್ರೀ ಶಿವಯೋಗೇಶ್ವರ ಮಹಾಸ್ವಾಮಿಗಳು, ಕೂಡಲ ಗುರುನಂಜೇಶ್ವರ ಮಠದ ಪೂಜ್ಯಶ್ರೀ ಗುರು ಮಹೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಲಿಂಗಸೂರಿನ ಮಾಣಿಕೇಶ್ವರಿ ಆಶ್ರಮದ ಪೂಜ್ಯಶ್ರೀ ಶಿವಶರಣೆ ನಂದೀಶ್ವರಿ ಅಮ್ಮನವರು ಸಮ್ಮುಖ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಪೀರಸಾಬ ಕೌತಾಳ, ಪ್ರಕಾಶ ಕರಿ, ಡಾ. ಆನಂದ ಪಾಂಡುರಂಗಿ, ಸದು ಮದರಿಮಠ, ಸಂಗಮೇಶ ದುಂದೂರ, ಪರಶುರಾಮ ಕಟ್ಟಿಮನಿ, ರುದ್ರಗೌಡ ರಬ್ಬನಗೌಡ್ರ, ಅರುಣ ಕಟ್ಟಿಮನಿ, ವಿಶ್ವನಾಥ ಹೂಗಾರ, ಮಹಾಂತಯ್ಯ ಸಾಲಿಮಠ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಕಲಬುರಗಿಯ ಬಲವಂತ ಉದನೂರ ಹಾಗೂ ಕುಟನೂರ (ಡಿ) ಶಿವಶಂಕರ ಬಿರಾದಾರ ಅವರಿಂದ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರಿಗೆ ತುಲಾಭಾರ ಸೇವೆ ಜರುಗಿತು. ನಂತರ ಧ್ವನಿಸುರುಳಿ ಹಾಗೂ ಸಪ್ತಸ್ವರದೀಪ ಗ್ರಂಥ ಬಿಡುಗಡೆಯಾಯಿತು. ನಂತರ ಸಂಗೀತ ಸಭೆ, ಸ್ವರ ಶ್ರದ್ಧಾಂಜಲಿ ಸಂಗೀತ ಸಮಾರಾಧನೆ ಕಾರ್ಯಕ್ರಮ ಜರುಗಿತು.


## ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101

ಜಿಲ್ಲಾ : ಗದಗ ರಾಜ್ಯ : ಕರ್ನಾಟಕ

ದೂ : 08372-259932 ಇ-ಮೇಲ್ : ka.gadag.betageri.cmc@gmail.com

ನಂ.ಗಬೆನಸ/ತಾಂ.ವಿ/ವಹಿ/ಟೆಂಡರ್/2025-26 ದಿನಾಂಕ: 13-06-2025

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000ರ ಪ್ರಕಾರ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ಸ್ ನಿಯಮದನ್ವಯ ಸನ್ 2025-26ನೇ ಸಾಲಿನ ನಗರಸಭೆ ಅನುದಾನ ಹಾಗೂ ಸನ್ 2024-25ನೇ ಸಾಲಿನ ರೇಲ್ವೆ ಇಲಾಖೆಯ ವಿಶೇಷ ಅನುದಾನದಲ್ಲಿ 02 ಕಾಮಗಾರಿಗಳಿಗೆ ಟೆಂಡರ್‌ಗಿಟ್ಟ ಮೊತ್ತ **ರೂ.21.55ಲಕ್ಷ**ಗಳಿಗೆ ಟೆಂಡರ್ ಆಹ್ವಾನಿಸಿದ್ದು, ಆಸಕ್ತರು ಇ-ಸಂಗ್ರಹಣಾ ವೇದಿಕೆಯಡಿ, **ಇಂಡೆಂಟ್ ನಂ: (1)** DMA/2024-25/OW/WORK_INDENT-36161 (Call-3) ಕುಡಿಯುವ ನೀರಿನ ಕೊಳವೆ ಮಾರ್ಗಗಳನ್ನು ಸ್ಥಳಾಂತರಗೊಳಿಸುವ ಕಾಮಗಾರಿ. **ಇಂಡೆಂಟ್ ನಂ: (2)** DMA/2025-26/OW/WORK_INDENT-40727 (Call-2) ಕೆ.ಎಚ್.ಪಾಟೀಲ ಬಡಾವಣೆಯಲ್ಲಿ ನೀರಿನ ಪೈಪ್‌ಲೈನ್ ಹಾಕುವುದು. http://kppp.karnataka.gov.in ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ.

ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು, ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು ಎಲೆಕ್ಟ್ರಾನಿಕ್ ಪದ್ಧತಿಯಲ್ಲಿ ತುಂಬಿ ಈ ಕೆಳಗೆ ನಿಗಧಿ ಪಡಿಸಿದ ದಿನಾಂಕಗಳಂದು ಟೆಂಡರ್ ಸಲ್ಲಿಸಬಹುದಾಗಿದೆ.

| | |
|---|---|
| ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ | 23-06-2025 Up to 16.00 Hours |
| ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ (Technical Bids) | 24-06-2025 Up to 16.30 Hours |

ಸದರಿ ಟೆಂಡರ್‌ಗೆ ಸಂಬಂಧಿಸಿದ ದಿನಾಂಕ ಹಾಗೂ ಇತರೆ ಬದಲಾವಣೆಗಳಾದಲ್ಲಿ KPPP Portalನಲ್ಲಿ ಪ್ರಕಟಿಸಲಾಗುವುದು, ಪತ್ರಿಕಾ ಪ್ರಕಟಣೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/-ಪೌರಾಯುಕ್ತರು
ಗದಗ-ಬೆಟಗೇರಿ ನಗರಸಭೆ

ವಾ.ಸಾ.ಇ/ಗದಗ/110/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka